ಸಂಪುಟ : 9 ಸಂಚಿಕೆ 308 ಪುಟ : 4+2 ಬೆಲೆ: 3.00 ಬುಧವಾರ ಜನವರಿ 22 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 308 Pages : 4+2 Price : 3.00 Wednesday January 22 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜನವರಿ 22 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ:** ವಾರ್ಡ್ ನಂ.11, 12 – ಕರಿಯಮ್ಮನ ಕಲ್ಲು, 15 ನಂ. ಶಾಲೆ, ಗಾಣಿಗೇರ ಭವನ, ಹನುಮಂತ ದೇವರ ಗುಡಿ, ಗಣಪತಿ ಕಟ್ಟಿ, ಪಿ ಮತ್ತು ಟಿ ಕ್ವಾರ್ಟರ್ಸ್, ಚರ್ಚ್ ಲೈನ್‌ಗಳು ಉಳಿದ ಕೆಲವು ಭಾಗಗಳು. ವಾರ್ಡ್ ನಂ. 8, 9 , 10 – ಹೆಲ್ತ್ ಕ್ಯಾಂಪ್, ಕುರಹಟ್ಟಿ ಪೇಟೆ, ಕಬಾಡಿ ರಸ್ತೆ, ಹದ್ದಣ್ಣವರ ಲೈನ್, ರವಿ ಅಂಗಡಿ ಲೈನ್, ಮಜ್ಜಿಗಿ ಓಣಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 20, 21, 23 – ಹಾರೋಗೇರಿ ಸಂದಿ, ಕಗನಳ್ಳಿ 2 ಭಾಗಗಳು, ಹೆಬಸೂರ ಸಂಧಿ, ಹೊನ್ನೆತಮ್ಮನ ಗುಡಿ ಭಾಗ-1,2 , ಸೋಮನಗೌಡ್ರ ಲೈನ್, ಕಮತರ ಪ್ಲಾಟ್, ಕಾಳಮ್ಮನ ಗುಡಿ, ಜಂತ್ಲಿಯವರ ಓಣಿ, ದ್ಯಾಮವ್ವನ ಗುಡಿ, ಉಸುಗಿನಗಟ್ಟಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 35 – ನೀಲಮ್ಮ ತಾಯಿ ಮಠ, ಆದರ್ಶನಗರ ಉಳಿದ ಕೆಲವು ಭಾಗಗಳು.

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿದ್ದಾರೆ.

ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ ಮಾಡಲಾಗುವುದು ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

---

### ಬೆಳಗಾವಿಯ ಸುವರ್ಣಸೌಧದ ಆವರಣದಲ್ಲಿ ಮಹಾತ್ಮ ಗಾಂಧಿಯವರ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ

# ಗಾಂಧಿ ಕನಸನ್ನು ನನಸಾಗಿಸುವುದು ಇಂದಿನ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ರಾಮ ಭಕ್ತರಾಗಿದ್ದ, ಶುದ್ಧ ಆತ್ಮದ ಹಿಂದೂ ಆಗಿದ್ದ ಮಹಾತ್ಮ ಗಾಂಧಿಯನ್ನು ಬಿಜೆಪಿ ಪರಿವಾರದ ಗೋಡ್ಸೆ ಹತ್ಯೆ ಮಾಡಿದ. ನಾವು ಮಹಾತ್ಮ ಗಾಂಧಿ ಅವರ ಹಿಂದುತ್ವದಲ್ಲಿ ನಂಬಿಕೆ ಇಟ್ಟಿದ್ದೇವೆ. ಬಿಜೆಪಿ ಪರಿವಾರವು ಗೋಡ್ಸೆಯ ಕೊಲೆಗಡುಕ ಸಿದ್ಧಾಂತವನ್ನು ಪಾಲಿಸುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ವಾಗ್ದಾಳಿ ನಡೆಸಿದರು.

ಬೆಳಗಾವಿಯಲ್ಲಿ 1924ರಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದಿದ್ದ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಸ್ಮರಣಾರ್ಥ ರಾಜ್ಯ ಕಾಂಗ್ರೆಸ್ ವತಿಯಿಂದ ಮಂಗಳವಾರ ಬೆಳಗಾವಿಯಲ್ಲಿ ಹಮ್ಮಿಕೊಂಡಿದ್ದ ಗಾಂಧಿ ಭಾರತ ಕಾರ್ಯಕ್ರಮದ ಅಂಗವಾಗಿ ಬೆಳಗಾವಿಯ ಸುವರ್ಣಸೌಧದ ಆವರಣದಲ್ಲಿ ಮಹಾತ್ಮ ಗಾಂಧಿಯವರ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.




ಗಾಂಧೀಜಿಯವರು ಹೇಳಿದ ಹಿಂದುತ್ವದ ದ್ವೇಷಿಯಾಗಿರುವ ಹಾಗೂ ಗಾಂಧಿ ತತ್ವದ ವಿರೋಧಿಯಾಗಿರುವ ಬಿಜೆಪಿ ಪರಿವಾರವು ಸಂವಿಧಾನ ವಿರೋಧಿ ಮತ್ತು ಅಂಬೇಡ್ಕರ್ ದ್ವೇಷಿಯೂ ಆಗಿದೆ. ನಾವು ಮಹಾತ್ಮ ಗಾಂಧಿಯವರ ವಿಚಾರಗಳನ್ನು ಮುಂದಿನ ಪೀಳಿಗೆಗೆ ಇನ್ನಷ್ಟು ಅರ್ಥಪೂರ್ಣವಾಗಿ ತಲುಪಿಸುವ, ಗಾಂಧಿಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸು ಮಾಡುವ ಗುರಿಯೊಂದಿಗೆ ಜೈ ಭಾಪು-ಜೈ ಭೀಮ್-ಜೈ ಸಂವಿಧಾನ ಅಭಿಯಾನವನ್ನು ಮುನ್ನಡೆಸುತ್ತೇವೆ ಎಂದು ಹೇಳಿದರು.

> ಇದೇ ಕಾರ್ಯಕ್ರಮದಲ್ಲಿ 1924ರಲ್ಲಿ ಬೆಳಗಾವಿಯಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಸಂದರ್ಭದಲ್ಲಿ ಕೈಗೊಂಡ ನಿರ್ಣಯಗಳು, ಅಧ್ಯಕ್ಷೀಯ ಭಾಷಣ ಮತ್ತಿತರ ಮಾಹಿತಿಗಳು ಹಾಗೂ ಅಪರೂಪದ ಛಾಯಾಚಿತ್ರಗಳನ್ನು ಒಳಗೊಂಡಿರುವ 'ಗಾಂಧಿ ಭಾರತ ಮರು ನಿರ್ಮಾಣ' ಹಾಗೂ ರಿಕ್ಲೇಮಿಂಗ್ ಗಾಂಧಿ ಭಾರತ್ ಎನ್ನುವ ಕನ್ನಡ ಹಾಗೂ ಇಂಗ್ಲಿಷ್ ಪುಸ್ತಕಗಳನ್ನು ರಾಜ್ಯಸಭೆ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಹಾಗೂ ಸಿದ್ದರಾಮಯ್ಯ ಬಿಡುಗಡೆಗೊಳಿಸಿದರು.

▸▸ 3ನೇ ಪುಟಕ್ಕೆ

---

# ಉಚಿತ ಸೈನಿಕ ತರಬೇತಿ ಶಿಬಿರ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾಮಿ ವಿವೇಕಾನಂದರ 162ನೇ ಜಯಂತಿಯ ಅಂಗವಾಗಿ ಎಲ್. ಆಯ್. ದಿಂಡೂರ ಆಂಗ್ಲ ಮಾಧ್ಯಮ ಶಾಲೆ ರೋಣ, ಜೈ ನರೇಂದ್ರ ಯುವ ಜನ ಹಿತ ಸಂಸ್ಥೆ, ಯುವ ಮಾರ್ಗ ಉಚಿತ ಸೈನಿಕ ತರಬೇತಿ ಕೇಂದ್ರ ಬಾಗಲಕೋಟೆ ಮತ್ತು ಮಾಜಿ ಸೈನಿಕರ ಪ್ರಕೋಷ್ಠಗಳ ಸಂಯೋಗದಲ್ಲಿ ಅಗ್ನಿವೀರ ಮತ್ತು ಆರ್ಮಿ ಸೈನಿಕ ತರಬೇತಿ ನಡೆಯಲಿದ್ದು, ಸೈನ್ಯ ಸೇರಬಯಸುವ ಗದಗ ಜಿಲ್ಲೆಯ ಯುವಕರಿಗೆ ಜ.27ರಿಂದ 30 ದಿನಗಳ ಉಚಿತ ಸೈನಿಕ ತರಬೇತಿ ಶಿಬಿರ ರೋಣ




ನಗರದಲ್ಲಿ ನಡೆಯಲಿದೆ.

ಯುವ ಮಾರ್ಗ ಸೈನಿಕ ತರಬೇತಿ ಕೇಂದ್ರದಿಂದ ಕೊಪ್ಪಳದಲ್ಲಿ ನಡೆದ ಶಿಬಿರದಲ್ಲಿ ಪಾಲ್ಗೊಂಡ 84 ವಿದ್ಯಾರ್ಥಿಗಳಲ್ಲಿ 72 ವಿದ್ಯಾರ್ಥಿಗಳು ನೇಮಕವಾಗಿದ್ದಾರೆ. ಪ್ರಸ್ತುತ ಮಂಗಳೂರು ಎಆರ್‌ಒ ವಿಭಾಗದ ನೇಮಕಾತಿಯು ಮಾರ್ಚ್‌ನಲ್ಲಿ ನಡೆಯಲಿದ್ದು, ಇದಕ್ಕೆ ಪೂರಕವಾಗುವಂತೆ ಈ ಶಿಬಿರವನ್ನು ಆಯೋಜನೆ ಮಾಡಲಾಗಿದೆ. ಶಿಬಿರಕ್ಕೆ ಅಭ್ಯರ್ಥಿಗಳನ್ನು ಡೆಮೋ ರ್‍ಯಾಲಿ ಮೂಲಕ ಆಯ್ಕೆ ಮಾಡಲಾಗುವದು.


ಆಯ್ಕೆ ಪ್ರಕ್ರಿಯೆಯು ಜ.26ರಂದು ರೋಣ ನಗರದ ದ್ರೋಣಾಚಾರ್ಯ ಕ್ರೀಡಾಂಗಣದಲ್ಲಿ ನಡೆಯಲಿದ್ದು, ಗದಗ ಜಿಲ್ಲೆಯ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶಿಬಿರದ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು ಯುವ ಮಾರ್ಗ ಉಚಿತ ಸೈನಿಕ ತರಬೇತಿ ಕೇಂದ್ರದ ಸಂಸ್ಥಾಪಕ ಅಧ್ಯಕ್ಷ ಕೆ.ರಾಘವೇಂದ್ರ, ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ(ರಾಜು) ಕುರುಡಗಿ, ಎಂ.ಎಸ್. ಕರಿಗೌಡ್ರ, ಪ್ರಕೋಷ್ಠಗಳ ಸಂಯೋಜಕ ಶಶಿಧರ್ ಎಲ್.ದಿಂಡೂರ, ಮಂಜುನಾಥ ಶಾಂತಗೇರಿ ವಿನಂತಿಸಿದ್ದಾರೆ.

ಅಭ್ಯರ್ಥಿಗಳು ಆಯ್ಕೆ ಪ್ರಕ್ರಿಯೆಗೆ ಪಾಲ್ಗೊಳಲು ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಆಧಾರ್ ಕಾರ್ಡ್, ಭಾವಚಿತ್ರಗಳೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಮುಖ್ಯ ತರಬೇತುದಾರರಾದ-ಕೆ.ರಾಘವೇಂದ್ರ ಜಿ(9606816822), ಕುಮಾರ ಅಸೂಟಿ (9632643513) ಮತ್ತು ಹನುಮಂತ (7026653472) ಇವರನ್ನು ಸಂಪರ್ಕಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಜ.25ರ ಸಂಜೆ 4 ಅಂತಿಮ ಸಮಯವಾಗಿರುತ್ತದೆ.

---

### ಹೆಸ್ಕಾಂ ಇಲಾಖೆ, ಗುತ್ತಿಗೆದಾರರ ನಿರ್ಲಕ್ಷ್ಯ | ವಿದ್ಯುತ್ ಕಂಬ ಬಿದ್ದು ಓರ್ವನಿಗೆ ಗಾಯ

# ತಪ್ಪಿದ ಭಾರೀ ಅನಾಹುತ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಮಾರಿಕಾಂಬಾ ದೇವಸ್ಥಾನದ ಪಕ್ಕದಲ್ಲಿನ ವಿದ್ಯುತ್ ಕಂಬವು ಮಂಗಳವಾರ ಬೆಳಿಗ್ಗೆ ಧರಾಶಾಹಿಯಾಗಿದೆ. ಘಟನೆಯಲ್ಲಿ ವ್ಯಕ್ತಿಯೊಬ್ಬರಿಗೆ ಗಾಯವಾಗಿದ್ದು, ಭಾರೀ ಅನಾಹುತವೊಂದು ತಪ್ಪಿದೆ.

ಪಟ್ಟಣ ಪಂಚಾಯಿತಿ ವತಿಯಿಂದ ಮಾರಿಕಾಂಬಾ ದೇವಸ್ಥಾನದ ಪಕ್ಕದಲ್ಲಿ ಚರಂಡಿ ಕಾಮಗಾರಿ ನಡೆದಿದ್ದು, ಚರಂಡಿಗೆ ಹೊಂದಿಕೊಂಡಂತೆ ವಿದ್ಯುತ್ ಕಂಬವಿದೆ. ವಿದ್ಯುತ್ ಕಂಬವು ಬಾಗಿ, ಆಗಲೋ ಈಗಲೋ ಬೀಳುವ ಸ್ಥಿತಿಯಲ್ಲಿತ್ತು. ಅದನ್ನು ಬದಲಿಸುವಂತೆ ಸ್ಥಳೀಯರು ಹೆಸ್ಕಾಂ ಅಧಿಕಾರಿಗಳಿಗೆ ಸಾಕಷ್ಟು ಬಾರಿ ಮನವಿ ಸಲ್ಲಿಸಿದ್ದರೂ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದರು.

ವಿದ್ಯುತ್ ಕಂಬದ ಬುಡದಲ್ಲಿಯೇ ಚರಂಡಿ ನಿರ್ಮಾಣ ಮಾಡಿದ ಪರಿಣಾಮ ವಿದ್ಯುತ್

▸▸ 3ನೇ ಪುಟಕ್ಕೆ

> ಚರಂಡಿ ನಿರ್ಮಾಣಕ್ಕೂ ಮುಂಚೆ ವಿದ್ಯುತ್ ಕಂಬವನ್ನು ಸ್ಥಳಾಂತರಿಸಬೇಕಿತ್ತು. ಅದನ್ನು ಬಿಟ್ಟು ಕಂಬದ ಬುಡದಲ್ಲಿ ಚರಂಡಿ ನಿರ್ಮಾಣ ಮಾಡಿದ ಫಲವಾಗಿ ಕಂಬದ ಬುಡ ಸಡಿಲಗೊಂಡಿದೆ. ಇದರ ಪರಿಣಾಮ ಕಂಬ ಬಿದ್ದಿದೆ. ಕಂಬವನ್ನು ಸ್ವಯಂ ಕಾರ್ಯದಡಿ ಪ.ಪಂ ಸ್ಥಳಾಂತರ ಮಾಡಬೇಕಿತ್ತು ಎಂದು ಹೆಸ್ಕಾಂ ಅಧಿಕಾರಿಗಳು ಜಾರಿಕೊಳ್ಳುತ್ತಾರೆ. ಪ.ಪಂ ಮತ್ತು ಹೆಸ್ಕಾಂ ಅಧಿಕಾರಿಗಳ ಬೇಜವಾಬ್ದಾರಿಗೆ ಸಾರ್ವಜನಿಕರು ಜೀವ ತೆರಬೇಕಾಗಿರುವುದು ಖಂಡನೀಯ.
>
> – **ಶಿವಪುತ್ರಪ್ಪ ಸಂಗನಾಳ**. ನಿವೃತ್ತ ಸೈನಿಕ.

---

## ಜಿಲ್ಲಾಡಳಿತದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಇವರ ಸಹಯೋಗದಲ್ಲಿ ನಿಜಶರಣ ಅಂಬಿಗರ ಚೌಡಯ್ಯ ಜಯಂತಿ-2025 ನ್ನು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಮಂಗಳವಾರ ಆಚರಿಸಲಾಯಿತು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ್ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ , ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ ಬಿ ಸಂಕದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ವಾರ್ತಾಧಿಕಾರಿ ವಸಂತ ಮಾಡ್ಲೂರ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಾರ್ವಜನಿಕರು, ನಿಜಶರಣ ಅಂಬಿಗರ ಚೌಡಯ್ಯ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಜಯಂತಿ ಆಚರಣೆ ಮಾಡಲಾಯಿತು.

---

### ಸುವರ್ಣಸೌಧದಲ್ಲಿ ಮಹಾತ್ಮ ಗಾಂಧಿ ಪ್ರತಿಮೆ ಅನಾವರಣಗೊಳಿಸಿದ ಸಿಎಂ ಸಿದ್ದರಾಮಯ್ಯ

## ಗಾಂಧೀಜಿಯವರ ಹಿಂದೂತ್ವದಲ್ಲಿ ನಂಬಿಕೆ ಇಟ್ಟಿದ್ದೇವೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ರಾಮ ಭಕ್ತರಾಗಿ, ಅತ್ಯುತ್ತಮ ಹಿಂದೂ ಆಗಿದ್ದ ಮಹಾತ್ಮ ಗಾಂಧಿಯನ್ನು ಬಿಜೆಪಿ ಪರಿವಾರದ ಗೋಡ್ಸೆ ಹತ್ಯೆ ಮಾಡಿದ. ನಾವು ಮಹಾತ್ಮ ಗಾಂಧಿ ಅವರ ಹಿಂದೂತ್ವದಲ್ಲಿ ನಂಬಿಕೆ ಇಟ್ಟಿದ್ದೇವೆ. ಬಿಜೆಪಿ ಪರಿವಾರ ಗೋಡ್ಸೆಯ ಕೊಲೆಗಡುಕ ಸಿದ್ಧಾಂತವನ್ನು ಪಾಲಿಸುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯಪಟ್ಟರು.

ಬೆಳಗಾವಿಯ ಸುವರ್ಣಸೌಧದಲ್ಲಿ ಮಂಗಳವಾರ ಮಹಾತ್ಮ ಗಾಂಧಿ ಪ್ರತಿಮೆ ಅನಾವರಣಗೊಳಿಸಿ ಅವರು ಮಾತನಾಡುತ್ತಿದ್ದರು.

ಗಾಂಧಿಯವರ ಹಿಂದೂತ್ವಕ್ಕೆ ವಿರೋಧಿಯಾಗಿರುವ ಬಿಜೆಪಿ ಪರಿವಾರ ಸಂವಿಧಾನ ವಿರೋಧಿ, ಅಂಬೇಡ್ಕರ್ ದ್ವೇಷಿಯೂ ಆಗಿದೆ. ಗಾಂಧಿಯವರು ಹಿಂದೂತ್ವದ ದ್ವೇಷಿಯಾಗಿರುವ, ಗಾಂಧಿ ತತ್ವದ ವಿರೋಧಿಯಾಗಿರುವ ಬಿಜೆಪಿ



ಪರಿವಾರ ಸಂವಿಧಾನ ವಿರೋಧಿ-ಅಂಬೇಡ್ಕರ್ ದ್ವೇಷಿಯೂ ಆಗಿದೆ ಎಂದರು. ನಾವು ಮಹಾತ್ಮ ಗಾಂಧಿಯವರ ವಿಚಾರಗಳನ್ನು ಮುಂದಿನ ಪೀಳಿಗೆಗೆ ಇನ್ನಷ್ಟು ಅರ್ಥಪೂರ್ಣವಾಗಿ ತಲುಪಿಸುವ, ಗಾಂಧೀಯವರ ಗ್ರಾಮ ಸ್ವರಾಜ್ಯದ ಕನಸನ್ನು ನನಸು ಮಾಡುವ ಗುರಿಯೊಂದಿಗೆ ಜೈ ಭಾಪು-ಜೈ ಭೀಮ್-ಜೈ ಸಂವಿಧಾನ ಅಭಿಯಾನಯನ್ನು ಮುನ್ನಡೆಸುತ್ತೇವೆ ಎಂದರು. ನೂರು ವರ್ಷಗಳ ಹಿಂದೆ ಕರ್ನಾಟಕದಲ್ಲಿ ನಡೆದ ಎಐಸಿಸಿ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದು ಮಹಾತ್ಮಗಾಂಧಿ. ಆ ದಿನ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಈ ನೆಲದಲ್ಲಿ ಹೆಚ್ಚಿಸಿದರು ಎಂದು ಸ್ಮರಿಸಿದರು.

ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ, ಎಐಸಿಸಿ ಪ್ರಧಾನ ಕಾರ್ಯದರ್ಶಿ, ಸಂಸದೆ ಪ್ರಿಯಾಂಕ ಗಾಂಧಿ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ಉಪ ಅಧ್ಯಕ್ಷ ಲಮಾಣಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ.ಸಿ. ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.

---

### ಜ.23ರಂದು ಬೆಂಗಳೂರಿನಲ್ಲಿ ದಲಿತ ಸಂಘಟನೆಗಳ ಒಕ್ಕೂಟದಿಂದ ಬೃಹತ್ ಪ್ರತಿಭಟನೆ- ವೆಂಕಟೇಶಯ್ಯ

## ಗೃಹ ಸಚಿವ ಅಮಿತ್ ಶಾ ರಾಜೀನಾಮೆ ನೀಡಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರನ್ನು ಅವಮಾನಿಸಿದ್ದಾರೆ. ಕೂಡಲೇ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಆಗ್ರಹಿಸಿ ಜ. 23ರಂದು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿ ದಲಿತ ಸಂಘಟನೆಗಳ ಒಕ್ಕೂಟದಿಂದ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ದಲಿತ ಮುಖಂಡ ಎನ್ ವೆಂಕಟೇಶಯ್ಯ ಹೇಳಿದರು.

ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, "ಅಂಬೇಡ್ಕರ್ ಹೆಸರು ಹೇಳುವುದು ಕೆಲವರಿಗೆ ಫ್ಯಾಷನ್



ಆಗಿದೆ" ಎಂದು ವಿವಾದಾತ್ಮಕ ಹೇಳಿಕೆ ನೀಡಿದ್ದಾರೆ. ಜೊತೆಗೆ "ಅಂಬೇಡ್ಕರ್ ಹೆಸರು ಹೇಳುವ ಬದಲು ದೇವರ ನಾಮಸ್ಮರಣೆ ಮಾಡಿದರೆ ಸ್ವರ್ಗಕ್ಕೆ ಹೋಗಬಹುದಿತ್ತು" ಎಂದು ಸಂಸತ್ತಿನಲ್ಲಿ ನಾಲಿಗೆ ಹರಿಬಿಟ್ಟಿದ್ದು ಸರಿಯಾದ ಕ್ರಮ ಅಲ್ಲ ಎಂದು ಗುಡುಗಿದರು.

ಡಾ. ಅಂಬೇಡ್ಕರ್ ಅವರು ಕೇವಲ ಭಾರತ ರತ್ನ ಮಾತ್ರವಲ್ಲ ವಿಶ್ವದ ರತ್ನವಾಗಿ ಹೊರಹೊಮ್ಮಿದ್ದಾರೆ. ಅಂಬೇಡ್ಕರ್ ಜನಿಸಿದ ರಾಷ್ಟ್ರದಲ್ಲಿ ಕೆಲವು ದುಷ್ಟ ಶಕ್ತಿಗಳಿದ್ದು, ಇತ್ತೀಚೆಗೆ ಅಂಬೇಡ್ಕರ್ ವಿರುದ್ಧ ಹೇಳಿಕೆ ನೀಡಿರುವ ಅಮಿತ್ ಶಾ ಇದಕ್ಕೆ ತಾಜಾ ಉದಾಹರಣೆಯಾಗಿದ್ದಾರೆ. ಅವರನ್ನು ಈ ಕೂಡಲೇ ದೇಶದಿಂದ ಗಡಿಪಾರು ಮಾಡಿ ಭಾರತವನ್ನು ಸ್ವಚ್ಛ ಮಾಡಬೇಕು ಎಂದು ಆಗ್ರಹಿಸಿದರು.

ಭಾರತೀಯ ಜನತಾ ಪಕ್ಷ ಆರ್ ಎಸ್ ಎಸ್ ಸಿದ್ಧಾಂತದ ಪ್ರಕಾರ ಕೆಲಸ ಮಾಡುತ್ತಿದೆ. ಆರ್ ಎಸ್ ಎಸ್ ನವರಿಗೆ ಸಂವಿಧಾನದ ಮೇಲೆ ನಂಬಿಕೆ ಇಲ್ಲ. ಮತ್ತು ಹಿಂದಿನಿಂದಲೂ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರಿಗೆ ಅವಮಾನ ಮಾಡುತ್ತಾ ಬಂದಿದೆ. ಇವತ್ತು ದೇಶದಲ್ಲಿ ಸಮಾನತೆಯಿಂದ ಬದುಕಲು ಅಂಬೇಡ್ಕರ್ ಹಾಕಿಕೊಟ್ಟ ದಾರಿ ಕಾರಣವಾಗಿದ್ದು, ಬಿಜೆಪಿ ಇದೆಲ್ಲವನ್ನು ಮರೆತು ದುರಹಂಕಾರದಿಂದ ಆಡಳಿತ ನಡೆಸುತ್ತಿದೆ ಎಂದು ವೆಂಕಟೇಶಯ್ಯ ಕೇಂದ್ರ ಸರ್ಕಾರದ ವಿರುದ್ಧ ಹರಿಹಾಯ್ದರು.

ಈ ಸಂದರ್ಭದಲ್ಲಿ ಬಸವರಾಜ್ ಸತ್ಯಮ್ಮನವರ, ರಮೇಶ್ ಬಾಳಮ್ಮವರ, ಪ್ರಕಾಶ್ ಕೆಲೂರ, ವಾಸುದೇವ ಹುಣಸಿಮರದ, ರಮೇಶ್ ಹುಣಸಿಮರದ, ಗುರು ಭಜಂತ್ರಿ, ಮಹೇಶ್ ಹುಣಸಿಮರದ, ಹನುಮಂತ ಸಾಲಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂಪಾದಕೀಯ

# ಪ್ರತಿಪಕ್ಷಗಳನ್ನು ಟೀಕಿಸಿದ ಶತಮಾನೋತ್ಸವ ಸಂಭ್ರಮ

ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ನಿಧನದ ಕಾರಣದಿಂದ ಮುಂದೂಡಲ್ಪಟ್ಟಿದ್ದ ಎಐಸಿಸಿ ಮಹಾ ಅಧಿವೇಶನದ ಶತಮಾನೋತ್ಸವ ಸಂಭ್ರಮ ಇಂದು ಅದ್ದೂರಿಯಾಗಿದೆ. 1924ರಲ್ಲಿ ಬೆಳಗಾವಿಯಲ್ಲಿ ನಡೆದ ಎಐಸಿಸಿ ಮಹಾ ಅಧಿವೇಶನದ ಅಧ್ಯಕ್ಷತೆಯನ್ನು ಮಹಾತ್ಮ ಗಾಂಧೀಜಿ ವಹಿಸಿದ್ದರು. ಅಲ್ಲದೆ ಮಹಾತ್ಮ ಗಾಂಧೀಜಿ ಅಧ್ಯಕ್ಷತೆ ವಹಿಸಿದ್ದ ಏಕೈಕ ಕಾಂಗ್ರೆಸ್ ಅಧಿವೇಶನವೂ ಅದಾಗಿತ್ತು.

ಹೀಗಾಗಿ ಆ ಮಹಾ ಅಧಿವೇಶನದ ಶತಮಾನೋತ್ಸವ ಸಂಭ್ರಮ ಕಾಂಗ್ರೆಸ್ ಪಾಲಿಗೆ ಬಹುದೊಡ್ಡ ಹೆಮ್ಮೆಯ ಸಂಗತಿ. ಆ ಕಾರಣಕ್ಕಾಗಿ ಅನೇಕ ವಿಧಾಯಕ ಕಾರ್ಯಕ್ರಮಗಳನ್ನ ರಾಜ್ಯ ಕಾಂಗ್ರೆಸ್ ಸಂಘಟಿಸಿತ್ತು. ವಿಶೇಷವಾಗಿ ಸುವರ್ಣ ವಿಧಾನಸೌಧದ ಎದುರು ಮಹಾತ್ಮ ಗಾಂಧೀಜಿಯ ಪ್ರತಿಮೆಯನ್ನ ಅನಾವರಣಗೊಳಿಸಿದ್ದು ಮಹಾತ್ಮ ಗಾಂಧೀಜಿಗೆ ನೀಡಿದ ಬಹುದೊಡ್ಡ.

ಅದರ ಜೊತೆಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕ್ಕೆ ಮಹಾತ್ಮ ಗಾಂಧೀಜಿ ಹೆಸರಿಟ್ಟಿದ್ದು ಸಹ ಸ್ವಾಗತಾರ್ಹವೇ.

ಆದರೆ ಈ ಶತಮಾನೋತ್ಸವದ ಸಂಭ್ರಮದಲ್ಲಿ ಗಾಂಧಿ ಭೇಟಿಯ ಕುರಿತಾದ ಯಾವುದೇ ಚಿಂತನೆಗಳು ನಡೆಯದಿರುವುದು ಸೋಜಿಗದ ಸಂಗತಿ. ಮಹಾತ್ಮ ಗಾಂಧೀಜಿಯವರ ಕನಸಿನ ಕಾಂಗ್ರೆಸ್ ಪಕ್ಷ ಈಗ ಹೇಗಾಗಿದೆ ಎನ್ನುವ ಕುರಿತು ಚಿಂತನ ಮಂಥನ ನಡೆಯಬೇಕು. ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಬಹುದೊಡ್ಡ ಕೊಡುಗೆ ನೀಡಿದ ಪಕ್ಷ ಇವತ್ತು ಯಾವ ಸ್ಥಿತಿಯಲ್ಲಿದೆ ಎನ್ನುವ ಬಗ್ಗೆ ಚರ್ಚೆ ನಡೆಯಬೇಕಿತ್ತು.

ಆದರೆ ಬೆಳಗಾವಿಯಲ್ಲಿ ನಡೆದದ್ದು ಅಪ್ಪಟ ರಾಜಕೀಯ ಕಾರ್ಯಕ್ರಮ. ಎ ಐ ಸಿ ಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆಯಿಂದ ಹಿಡಿದು ಮುಖ್ಯಮಂತ್ರಿ ಸಿದ್ದರಾಮಯ್ಯ ವರೆಗೂ ಎಲ್ಲರೂ ಬಿಜೆಪಿಯನ್ನು ಟೀಕಿಸುವುದರಲ್ಲಿಯೇ ತಮ್ಮ ಮಾತುಗಳನ್ನ ಮುಗಿಸಿದರು. ಹಿಂದುತ್ವವಾದ ಮತ್ತು ಮನುವಾದವನ್ನು ಟೀಕಿಸುವದೇ ಗಾಂಧಿ ಭೇಟಿಯ ಶತಮಾನೋತ್ಸವ ಸಂಭ್ರಮದ ಸಂಕೇತ ಎನ್ನುವಂತಾಗಿತ್ತು.

ಗಾಂಧಿ ಭೇಟಿಯ ಶತಮಾನೋತ್ಸವ ಸಂಭ್ರಮವನ್ನ ಮತ್ತಷ್ಟು ಅರ್ಥಪೂರ್ಣವಾಗಿ ಆಚರಿಸುವ ಅವಕಾಶವನ್ನು ಕಾಂಗ್ರೆಸ್ ಕಳೆದುಕೊಂಡಿದ್ದು ಒಳ್ಳೆಯ ಬೆಳವಣಿಗೆಯಲ್ಲ.

**'ಹೆಸರಾಯಿತು ಕರ್ನಾಟಕ' ಕವಿಗೋಷ್ಠಿಯ ಸಾನ್ನಿಧ್ಯ ವಹಿಸಿದ ಡಾ. ಬಸವರಾಜ ದೇವರು ಅಭಿಮತ**

# ಪುಟ್ಟರಾಜ ಸೇವಾ ಸಮಿತಿಯ ಸೇವೆ ಅನನ್ಯ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಪುಟ್ಟರಾಜ ಗವಾಯಿಗಳ ಆಶಯದಂತೆ ಸಂಗೀತ, ಸಾಹಿತ್ಯ ಸೇವೆ ನಿರಂತರವಾಗಿ ನಡೆಸುತ್ತಾ, ಪ್ರತಿಭಾವಂತರಿಗೆ ವೇದಿಕೆ ಕಲ್ಪಿಸಿಕೊಟ್ಟು, ಅವರ ಕಲಾಪ್ರದರ್ಶನ ಸಾರ್ವತ್ರಿಕಗೊಳಿಸುತ್ತಿರುವ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ನಾಡ ನುಡಿಯ ಸೇವೆ ಅನನ್ಯ. ಸಮಿತಿಯ ಕಾರ್ಯ ಶ್ಲಾಘಿಸುವಂಥದು ಎಂದು ಮನ್ಸೂರಿನ ರೇವಣಸಿದ್ಧೇಶ್ವರ ಮಠದ ಡಾ. ಬಸವರಾಜ ದೇವರು ಅಭಿಪ್ರಾಯ ವ್ಯಕ್ತಪಡಿಸಿದರು.



ಅವರು ಮನ್ಸೂರ ಗ್ರಾಮದ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ಮಠದ ಸಭಾಭವನದಲ್ಲಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಜಂಟಿಯಾಗಿ ಹಮ್ಮಿಕೊಂಡಿದ್ದ ಕರ್ನಾಟಕ ನಾಮಕರಣ ಸುರ್ವಣ ಮಹೋತ್ಸವ ಸ್ಮರಣೆಯಲ್ಲಿ 'ಹೆಸರಾಯಿತು ಕರ್ನಾಟಕ' ಕವಿಗೋಷ್ಠಿ, ಕಾವ್ಯಗಾಯನ, ನೃತ್ಯ ನಮನ ಮತ್ತು ಸುವರ್ಣಸಿರಿ ಸಮ್ಮಾನ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ಹೆಸರಾಯಿತು ಕರ್ನಾಟಕ ಉಪನ್ಯಾಸ ನೀಡಿದ ಸುರೇಶ ಕಡೆಮನಿ, ಕನ್ನಡ ಭಾಷೆಯ ಪ್ರಾಚೀನತೆ, ಕನ್ನಡ ಭಾಷಯ ಇತಿಹಾಸ, ಕರ್ನಾಟಕ ಏಕೀಕರಣದ ಹೋರಾಟದ ದಿನಗಳನ್ನು ಮೆಲುಕು ಹಾಕುತ್ತಾ ಹೋರಾಟಗಾರರ ತ್ಯಾಗ ಬಲಿದಾನಗಳನ್ನು ಸ್ಮರಿಸಿದರು. ಮತ್ತೊಬ್ಬ ಅತಿಥಿ ವಿಭೂತಿ ಪತ್ರಿಕೆ ಸಂಪಾದಕ ಅಂದಾನೆಪ್ಪ ವಿಭೂತಿ ಮಾತನಾಡುತ್ತಾ, ಕರ್ನಾಟಕ ಹೆಸರಾಯಿತು, ಆದರೆ ಕನ್ನಡ ಭಾಷೆ ಕನ್ನಡಿಗರಲ್ಲಿ ಉಸಿರಾಗಿದೆಯೆ? ಆಗಿಲ್ಲ ಎಂದರೆ, ಯಾಕೆ ಆಗಿಲ್ಲ ಎಂದು ಪ್ರಶ್ನಿಸುತ್ತ ಇತ್ತೀಚಿನ ದಿನಗಳಲ್ಲಿ ಕನ್ನಡಿಗರಲ್ಲಿ ಹೆಚ್ಚಾಗಿರುವ ಇಂಗ್ಲಿಷ್ ವ್ಯಾಮೋಹ, ಕನ್ನಡ ಕನಿಷ್ಠ ಎನ್ನುವ ಭ್ರಮೆ ಇದಕ್ಕೆ ಕಾರಣ ಎಂದು ಉದಾಹರಣೆಗಳೊಂದಿಗೆ ವಿವರಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಸ್ನಾ. ಸಂಗೀತ ವಿಭಾಗದ ಪ್ರಾಧ್ಯಾಪಕರು ಹಾಗೂ ಅಧ್ಯಕ್ಷರು, ಡೀನ್‌ರು ಕಲಾ ನಿಖಾಯದ ಡಾ. ಮೃತ್ಯುಂಜಯ ಅಗಡಿ ತಮ್ಮ ಗಾಯನದ ಮೂಲಕ ಹಿಂದೂಸ್ತಾನಿ ಸಂಗೀತ ದಿಗ್ಗಜ ಪಂಡಿತ ಮಲ್ಲಿಕಾರ್ಜುನ ಮನ್ಸೂರ್ ಮತ್ತು ಪಂ. ಪಂಚಾಕ್ಷರಿ ಮತ್ತಿಗಟ್ಟಿ ಅವರನ್ನು ನೆನಪಿಸಿದರು.

ಪ್ರಾರಂಭದಲ್ಲಿ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಸಂಸ್ಥಾಪಕ, ಕಲಾ ವಿಕಾಸ ಪರಿಷತ್‌ನ ಅಧ್ಯಕ್ಷ ಸಿ.ಕೆ.ಎಚ್. ಕಡಣಿ ಶಾಸ್ತ್ರೀಗಳು ಪ್ರಾಸ್ತಾವಿಕವಾಗಿ ಮಾತನಾಡಿ ಸಮಿತಿಯ ಸಾಧನೆಗಳನ್ನು ತಿಳಿಸಿದರು. ಡಾವಣಗೇರಿಯ ಡಾ. ಪಂ. ಪುಟ್ಟರಾಜ ಸೇವಾ ಸಮಿತಿಯ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷೆ ಸೌಮ್ಯ ಸತೀಶ್ ಧಾರವಾಡ, ಗಂಗಾಧರ ಎಮ್ಮಿಗನೂರ ಸಾಂದರ್ಭಿಕವಾಗಿ ಮಾತನಾಡಿದರು. ಕವಿಗೋಷ್ಠಿಯ ಅಧ್ಯಕ್ಷತೆಯನ್ನು ಹೂವಿನಹಡಗಲಿಯ ಎಂಪಿಎಂ ಕೊಟ್ರಯ್ಯನವರು ವಹಿಸಿದ್ದರು. ಡಾ. ಭೀಮಾಶಂಕರ ಎಂ.ಆರ್. ಧಾರವಾಡ ಇವರು ಹೆಸರಾಯಿತು ಕರ್ನಾಟಕ ರಾಜ್ಯಮಟ್ಟದ ಕವಿ ಗೋಷ್ಠಿಯ ಆಶಯ ನುಡಿಗಳನ್ನಾಡಿದರು. ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಕವಿ, ಕವಯಿತ್ರಿಯರು ತಮ್ಮ ಕವನಗಳನ್ನು ವಾಚಿಸಿದರು.

ಸಮಾರಂಭದ ಅಧ್ಯಕ್ಷತೆಯನ್ನು ಪಂ. ಫಕೀರೇಶ್ವರ ಶಾಸ್ತ್ರೀಗಳು ವಹಿಸಿದ್ದರು. ಬಾಲ ಕಲಾವಿರಾದ ಅಮೂಲ್ಯ ಮತ್ತು ಐಶ್ವರ್ಯ ಸ್ವಾಗತ ನೃತ್ಯ ಮಾಡಿದರು. ವಾರುಣಿ ದೇಶಪಾಂಡೆ ಪ್ರಾರ್ಥನೆ ನಡೆಸಿಕೊಟ್ಟರು. ಶರಣ ಬಡ್ಡಿ ಸಿಗ್ಗಾಂವ ಇವರಿಂದ ಭರತನಾಟ್ಯ ಡಾ. ಶರ್ಮಿಳಾ ಹಾಗೂ ಶಿಷ್ಯವೃಂದ, ಡಾ. ಸುಮಾ ಹಡಪದ ಇವರ ಗಾಯನ ಪ್ರೇಕ್ಷಕರನ್ನು ರಂಜಿಸಿದವು. ಸಂಚಾಲಕರಾಗಿ ಡಾ. ಸುಮಾ ಹಡಪದ ಮತ್ತು ಬಳಗದವರು ಸಮಾರಂಭದ ಯಶಸ್ವಿಗೆ ಕಾರ್ಯ ನಿರ್ವಹಿಸಿದರು. ವೀರೇಶರಡ್ಡಿ ಟಿ.ಕಾಮರಡ್ಡಿ ಸ್ವಾಗತಿಸಿದರು. ಯಮನಪ್ಪ ಜಾಲಗಾರ ಮತ್ತು ಎ.ಬಿ. ರುದ್ರಮ್ಮ ಕಾರ್ಯಕ್ರಮ ನಿರೂಪಣೆ ಮಾಡಿದರು. ದಾನಮ್ಮ ಅಂಗಡಿ ವಂದಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಎಸ್.ಕೆ. ಮೇಲ್ಮುರಿ, ಕಸ್ತೂರೆಮ್ಮ ಹಿರೇಮಠ, ಎಂಪಿಎಂ ಕೊಟ್ರಯ್ಯ, ಚಂದ್ರಕಲಾ ಜನಗೌಡ, ಡಾ. ಶ್ರೀದೇವಿ ಸುವರ್ಣಖಂಡಿ, ಹೆಚ್.ಆರ್. ಬಾಗವಾನ, ಸೌಮ್ಯಶ್ರೀ ಹಿರೇಮಠ, ಶಶಿಧರ ಸ್ವಾಮಿ ಹಿರೇಮಠ, ಹಾಲಪ್ಪ ಚಿಗಟೇರಿ, ಬ ಸವರಾಜ ಹಡಪದ ಹಳಿಯಾಳ ಡಾ. ಬಿ.ಎ. ರಾಜಪ್ಪ, ಮಹಾಂತೇಶ ಕುಂಬಾರ, ಅನ್ನಪೂರ್ಣ ಜವಳಿ ಇವರುಗಳಿಗೆ ಸುವರ್ಣ ಕರ್ನಾಟಕ ಸಿರಿ ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು.

# ಜ.26ರಂದು ಗಣರಾಜ್ಯೋತ್ಸವ ದಿನಾಚರಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತದಿಂದ ಗಣರಾಜ್ಯೋತ್ಸವ ದಿನಾಚರಣೆ ಪ್ರಯುಕ್ತ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜನವರಿ 26 ರಂದು ಬೆಳಿಗ್ಗೆ 9 ಗಂಟೆಗೆ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಧ್ವಜಾರೋಹಣ ನೆರವೇರಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳಾದ ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್ , ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಸಂಸದರಾದ ಪಿ.ಸಿ.ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಶಾಸಕರಾದ ಸಿ.ಸಿ.ಪಾಟೀಲ, ಡಾ.ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಚಿ ಆಗಮಿಸುವರು.

ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿ.ಪಂ.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಸ್ವಾಗತ ಕೋರಿದ್ದಾರೆ.

2025ರ ಗಣರಾಜ್ಯೋತ್ಸವ ಕಾರ್ಯಕ್ರಮಗಳು

ಜನವರಿ 26 ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ರಾಜ್ಯ ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಅವರಿಂದ ಧ್ವಜಾರೋಹಣ ಕಾರ್ಯಕ್ರಮ ಧ್ವಜಾರೋಹಣ, ನಾಡಗೀತೆ, ಪರೇಡ್ ವೀಕ್ಷಣೆ, ಪಥ ಸಂಚಲನ ಮತ್ತು ವಂದನೆ ಸ್ವೀಕಾರ, ಗಣರಾಜ್ಯೋತ್ಸವದ ಸಂದೇಶ, ಸಾಧಕರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

# ಜ. 27ರಂದು ನೇರ ಸಂದರ್ಶನ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದ ಸಾರ್ವಜನಿಕ ಆಸ್ಪತ್ರೆ ಮುಂಡರಗಿ, ರೋಣ, ನರಗುಂದ ಹಾಗೂ ಶಿರಹಟ್ಟಿ ಇಲ್ಲಿ ತುರ್ತು ಚಿಕಿತ್ಸಾ ವೈದ್ಯಾಧಿಕಾರಿ/ಅಪಘಾತ ವೈದ್ಯಕೀಯ ಅಧಿಕಾರಿ ಹುದ್ದೆಗಳು ಮಂಜೂರಾಗಿರುತ್ತವೆ. ಸರ್ಕಾರದ ಸುತ್ತೋಲೆ ಪ್ರಕಾರ ಮಂಜೂರಾದ ಹುದ್ದೆಗಳನ್ನು ತಾತ್ಕಾಲಿಕವಾಗಿ ಅಥವಾ ಕ್ರಮಬದ್ದವಾಗಿ ನೇಮಕವಾಗುವವರೆಗೆ ರೋಸ್ಟರ್ ಕಮ್ ಮೆರಿಟ್ ಆಧಾರದ ಮೇಲೆ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಸಂದರ್ಶನ (ವಾಕ್-ಇನ್-ಇಂಟರ್‌ವ್ಯೂವ್) ಮೂಲಕ ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಅಹ್ವಾನಿಸಲಾಗಿದೆ. ಇಚ್ಛೆಯುಳ್ಳ ಅಭ್ಯರ್ಥಿಗಳು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ, ಕೊಠಡಿ ಸಂ-101, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಇಲ್ಲಿಗೆ ತಮ್ಮ ಬಯೋಡೆಟಾ ಮತ್ತು ವಿದ್ಯಾರ್ಹತೆಗೆ ಸಂಬಂಧಿಸಿದ ಎಲ್ಲಾ ಮೂಲ ದಾಖಲಾತಿಗಳ ದ್ವಿಪ್ರತಿಗಳೊಂದಿಗೆ ಜನವರಿ 27 ರಂದು ನೇರ ಸಂದರ್ಶನಕ್ಕೆ ಹಾಜರಾಗಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

# ಗಾಜಾ ಕುರಿತು ಆಘಾತಕಾರಿ ಹೇಳಿಕೆ ನೀಡಿದ ಟ್ರಂಪ್

**■ವಿಜಯಸಾಕ್ಷಿ ಸುದ್ದಿ, ವಾಷಿಂಗ್ಟನ್**



ರಾಜತಾಂತ್ರಿಕ ಪ್ರಯತ್ನಗಳ ಹೊರತಾಗಿಯೂ ಗಾಜಾ ಕದನ ವಿರಾಮ ನಿಲ್ಲುವುದು ಅನುಮಾನವೆಂದು ಅಮೆರಿಕದ ನೂತನ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅಭಿಪ್ರಾಯಿಸಿದ್ದಾರೆ.

ಎರಡೂ ಕಡೆಯವರು ಒಪ್ಪಂದವನ್ನು ಕಾಯ್ದು ಕೊಳ್ಳುತ್ತಾರೆಯೇ ಮತ್ತು ಒಪ್ಪಂದದಲ್ಲಿ ಮುಂದುವರಿ ಯುತ್ತಾರೆಯೇ ಎಂದು ಶ್ವೇತಭವನಕ್ಕೆ ಹಿಂತಿರುಗುತ್ತಿದ್ದಂತೆ ವರದಿಗಾರರೊಬ್ಬರು ಕೇಳಿದಾಗ, ಟ್ರಂಪ್, "ನನಗೆ ವಿಶ್ವಾಸವಿಲ್ಲ" ಎಂದು ಹೇಳಿದ್ದಾರೆ.

"ಅದು ನಮ್ಮ ಯುದ್ಧವಲ್ಲ; ಇದು ಅವರ ಯುದ್ಧ. ಆದರೆ ನನಗೆ ವಿಶ್ವಾಸವಿಲ್ಲ" ಎಂದು ಟ್ರಂಪ್ ತಿಳಿಸಿದ್ದಾರೆ.

ಅಕ್ಟೋಬರ್ 7, 2023ರಂದು ಇಸ್ರೇಲ್ ಮೇಲೆ ಅಭೂತಪೂರ್ವ ದಾಳಿಯೊಂದಿಗೆ ಪ್ರಾರಂಭವಾದ ಯುದ್ಧದಲ್ಲಿ ಹಮಾಸ್ "ದುರ್ಬಲಗೊಂಡಿದೆ" ಎಂದು ನಂಬಿದ್ದೆ. ನಾನು ಗಾಜಾದ ಚಿತ್ರವನ್ನು ನೋಡಿದೆ. ಗಾಜಾ ಒಂದು ಬೃಹತ್ ಧ್ವಂಸ ಸ್ಥಳದಂತಿದೆ ಎಂದು ಟ್ರಂಪ್ ಹೇಳಿದ್ದಾರೆ.

ಉದ್ಯಮಿಯಾಗಿದ್ದು ಜನಪ್ರಿಯ ರಾಜಕಾರಣಿಯಾಗಿ ಮಾರ್ಪಟ್ಟಿರುವ ಟ್ರಂಪ್, ಕದನ ವಿರಾಮ ಯೋಜನೆ ಮುಂದುವರೆದರೆ ಗಾಜಾದಲ್ಲಿ "ಅದ್ಭುತ" ಪುನರ್ನಿರ್ಮಾಣವನ್ನು ನೋಡಬಹುದು. ಇದು ಸಮುದ್ರದ ಮೇಲೆ ಅದ್ಭುತವಾದ ಸ್ಥಳ ಅತ್ಯುತ್ತಮ ಹವಾಮಾನ. ನಿಮಗೆ ತಿಳಿದಿದೆ, ಎಲ್ಲವೂ ಚೆನ್ನಾಗಿದೆ. ಇದರೊಂದಿಗೆ ಕೆಲವು ಸುಂದರವಾದ ಕೆಲಸಗಳನ್ನು ಮಾಡಬಹುದು" ಎಂದು ಅವರು ತಿಳಿಸಿದ್ದಾರೆ.

# ಕಲಾವಿದರಿಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ನಾಗಾವಿ ಗ್ರಾಮದಲ್ಲಿ ಯಲ್ಲಮ್ಮದೇವಿ ಜಾತ್ರಾ ಮಹೋತ್ಸವದ ಅಂಗವಾಗಿ ಗ್ರಾಮದ ಸಮಾನ ಮನಸ್ಕ ಬಳಗದವರು ಹಮ್ಮಿಕೊಂಡಿದ್ದ ಗಜೇಂದ್ರಗಡದ ಪುನೀತ್ ಮೆಲೋಡೀಸ್ ಅವರ ರಸಮಂಜರಿ ಕಾರ್ಯಕ್ರಮಕ್ಕೆ ಆಗಮಿಸಿದ್ದ ಗೋಕಾಕದ ಕಲಾವಿದ ರಾಜಣ್ಣ ಅವರನ್ನು ಗ್ರಾಮದ ಸೋಮೇಶ ಹಿರೇಮಠ ಪ್ರತಿಷ್ಠಾನ ಹಾಗೂ ನೂತನವಾಗಿ ಪ್ರಾರಂಭಗೊಂಡಿರುವ ನಾಗಾವಿ ನಾನಾ ಯೂಟ್ಯೂಬ್ ವತಿಯಿಂದ ಸನ್ಮಾನಿಸಿ, ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಪುನೀತ್ ಮೆಲೋಡೀಸ್ ಕಲಾ ತಂಡದ ಮುಖ್ಯಸ್ಥೆ ಪಲ್ಲವಿ ಹಾಗೂ ಹುಬ್ಬಳ್ಳಿಯ ಕಲಾವಿದೆ ಸ್ಟೆಫೀ ಲೂಯಿಸ್ ಸೇರಿದಂತೆ ಸಹ ಕಲಾವಿದರನ್ನು ಸಾನ್ನಿಧ್ಯ ವಹಿಸಿದ್ದ ಬೆಳಧಡಿ ಗ್ರಾಮದ ಶ್ರೀದೇವಿ ಆರಾಧಕರಾದ ಶಂಭುಲಿಂಗಯ್ಯ ಕಲ್ಮಠ, ಬಿಜೆಪಿ ಮುಖಂಡರಾದ ಮಹೇಶ ದಾಸರ ಸನ್ಮಾನಿಸಿದರು. ಸನ್ಮಾನ ಸ್ವೀಕರಿಸಿದ ಹಾಸ್ಯ ಕಲಾವಿದ ರಾಜಣ್ಣ ಮಾತನಾಡಿ, ಉತ್ತರ ಕರ್ನಾಟಕದಲ್ಲಿ ಸಂಗೀತ, ಸಾಹಿತ್ಯ, ಕಲೆಗಳು ಹಿಮಾಲಯದಷ್ಟೇ ಎತ್ತರಕ್ಕೆ ಬೆಳೆದಿವೆ. ರಂಗಭೂಮಿಯಲ್ಲಿ ಎಲಿವಾಳ ಸಿದ್ದಯ್ಯನವರು, ವೈಜನಾಥ್ ಬಿರಾದಾರ ಅವರಂತಹ ಪ್ರಬುದ್ಧ ಹಾಸ್ಯ ನಟರು ಉತ್ತರ ಕರ್ನಾಟಕದ ಕೀರ್ತಿಯನ್ನು ಹೆಚ್ಚಿಸಿದ್ದಾರೆ. ದಕ್ಷಿಣ ಕರ್ನಾಟಕದಲ್ಲಿ ನಿರ್ಲಕ್ಷ್ಯಕ್ಕೆ ಒಳಗಾಗಿದ್ದ ನಮ್ಮ ಕಲಾವಿದರು ಈಗ ಬೆಂಗಳೂರಿನಲ್ಲಿ ನೆಲೆಸಿ ಹಲವಾರು ವಾಹಿನಿಗಳಲ್ಲಿ ಮಿಂಚುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಸೋಮೇಶ ಹಿರೇಮಠ ಪ್ರತಿಷ್ಠಾನದ ಅಧ್ಯಕ್ಷ ಬಸವಣ್ಣೆಯ್ಯ ಹಿರೇಮಠ ಅಧ್ಯಕ್ಷತೆ ವಹಿಸಿದ್ದರು. ಮಂಜು ಕಪ್ಪತ್ತನವರ ಸ್ವಾಗತಿಸಿದರು. ಧೀರಜ್ ನಂದಿಕೋಲಮಠ ಕಾರ್ಯಕ್ರಮ ನಿರೂಪಿಸಿದರು. ಹರೀಶ ಮಾಡಳ್ಳಿ ವಂದಿಸಿದರು.

# ಅಂಬಿಗರ ಚೌಡಯ್ಯನವರ ಜಯಂತಿ ಆಚರಣೆ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ತಾಲೂಕಾ ಆಡಳಿತ ಹಾಗೂ ಸಮಾಜದ ವತಿಯಿಂದ ಮಂಗಳವಾರ ನಿಜಶರಣ ಅಂಬಿಗರ ಚೌಡಯ್ಯನವರ 905ನೇ ಜಯಂತಿಯನ್ನು ಆಚರಿಸಲಾಯಿತು.

ಅಂಬಿಗರ ಚೌಡಯ್ಯನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ತಹಸೀಲ್ದಾರ ಅನಿಲ ಬಡಿಗೇರ, ನಿಜಶರಣ ಅಂಬಿಗರ ಚೌಡಯ್ಯನವರು 11ರಿಂದ 12ನೇ ಶತಮಾನದಲ್ಲಿ ಅತ್ಯಂತ ನೇರ, ನಿಷ್ಠುರ, ವೈಚಾರಿಕ ವಚನಗಳ ಮೂಲಕ ಮೂಢನಂಬಿಕೆ, ಕಂದಾಚಾರ ಮುಂತಾದವುಗಳನ್ನು ತೀವ್ರವಾಗಿ ವಿರೋಧಿಸಿ ಪ್ರಸಿದ್ಧಿ ಪಡೆದಿದ್ದರು ಎಂದರು.

ನಿಜಶರಣ ಅಂಬಿಗರ ಚೌಡಯ್ಯನವರ ಸಮಾಜದ ತಾಲೂಕಾಧ್ಯಕ್ಷ ಅಶೋಕ ಹುಬ್ಬಳ್ಳಿ ಮಾತನಾಡಿ, ನದಿ-ಹಳ್ಳ-ಕೊಳ್ಳ, ಹೊಳೆಗಳಲ್ಲಿ ದೋಣಿ ಸಾಗಿಸುವ ಅಂಬಿಗ ವೃತ್ತಿಯ ಚೌಡಯ್ಯನವರು 12ನೇ ಶತಮಾನದ ಪ್ರಸಿದ್ಧ ವಚನಕಾರರಾಗಿದ್ದರು. ಸಾಮಾಜಿಕ ಬದಲಾವಣೆಯ ಬಗೆಗೆ ತೀವ್ರ ಕಳಕಳಿಯುಳ್ಳ ಧ್ಯೇಯವಾದಿ, ಅಸತ್ಯ, ಅನ್ಯಾಯ, ಮೂಢನಂಬಿಕೆಗಳನ್ನು ಖಂಡಿಸುವ ನಿಷ್ಠುರವಾದಿಯಾಗಿದ್ದರು. ಕೆಳವರ್ಗದ ಶೋಷಣೆಗೆ ಒಳಗಾದವನ್ನು ಮೇಲುಸ್ತರಕ್ಕೆ ತಂದು, ತಮ್ಮ ಹರಿತವಾದ ವಚನಗಳ ಮೂಲಕ ಸಮಾಜದಲ್ಲಿ ವೈಚಾರಿಕ ಕ್ರಾಂತಿಯನ್ನು ತಂದಿದ್ದಾರೆ. ಇಂತಹವರ ಆದರ್ಶ ಎಲ್ಲರಿಗೂ ಸದಾಕಾಲ ಸ್ಫೂರ್ತಿದಾಯಕ ಎಂದರು.

ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಪ್ರವೀಣ ಹುಬ್ಬಳ್ಳಿ, ಶಂಕರ ಕುಸ್ಲಾಪೂರ, ಮಹಾಂತೇಶ ದಶಮನಿ, ಮಹ್ಮದಶಫಿ ಹೆಸರೂರ, ಬಾಬಾಜಾನ ಕೋಳಿವಾಡ, ಬಸವರಾಜ ಕಂಬಳಿ, ಶಿರಸ್ತೇದಾರ ಹುಸೇನಸಾಬ ಬಾವಿಕಟ್ಟಿ, ಎಎಸ್‌ಐ ಬಾರಿಗಿಡದ ಮತ್ತು ಕಂದಾಯ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

**ಜಕ್ಕಲಿಯ ಅಂದಾನಪ್ಪ ದೊಡ್ಡಮೇಟಿಯವರ ಮನೆಯಿಂದ ಪ್ರಾರಂಭವಾದ ಭುವನೇಶ್ವರಿ ಮೆರವಣಿಗೆ**

# ಜಕ್ಕಲಿ ಗಂಡು ಮೆಟ್ಟಿನ ನಾಡು



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರೋಣ ತಾಲೂಕಿನ ಜಕ್ಕಲಿ ಗ್ರಾಮ ಗಂಡು ಮೆಟ್ಟಿನ ನಾಡಾಗಿದ್ದು, ಇಲ್ಲಿನ ಅಂದಾನಪ್ಪ ದೊಡ್ಡಮೇಟಿ ಕನ್ನಡ ಕಲಿಯಾಗಿದ್ದಾರೆ. ಆದ್ದರಿಂದ ಈ ಸಾರೆಯ ಜಿಲ್ಲಾ ಸಮ್ಮೇಳನದ ಮೆರವಣಿಗೆಯನ್ನು ತಾಯಿ ಭುವನೇಶ್ವರಿಯ ಮೂಲ ನೆಲೆಯಾದ ಜಕ್ಕಲಿಯಿಂದ ಪ್ರಾರಂಭಿಸಲು ನಿರ್ಧರಿಸಿ ಇಂದು ಅದಕ್ಕೆ ಚಾಲನೆ ನೀಡುತ್ತಿದ್ದೇನೆ ಎಂದು ರೋಣ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಗಜೇಂದ್ರಗಡದಲ್ಲಿ ನಡೆದ 10ನೇ ಜಿಲ್ಲಾ ಸಾಹಿತ್ಯ ಸಮ್ಮೇಳನದ ಪೂರ್ವಭಾವಿಯಾಗಿ ಜಕ್ಕಲಿಯ ಅಂದಾನಪ್ಪ ದೊಡ್ಡಮೇಟಿಯವರ ಮನೆಯಿಂದ ಪ್ರಾರಂಭವಾದ ಭುವನೇಶ್ವರಿ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ಮೈಸೂರು ರಾಜ್ಯವೆಂದು ಹೆಸರಾಗಿದ್ದ ರಾಜ್ಯಕ್ಕೆ ಕರ್ನಾಟಕವೆಂದು ಹೆಸರನ್ನಿರಿಸಿಬೇಕೆಂದು ಹೋರಾಟ ಪ್ರಾರಂಭಿಸಿದವರಲ್ಲಿ ಅಂದಾನಪ್ಪ ದೊಡ್ಡಮೇಟಿಯವರು ಪ್ರಮುಖರು. ಕರ್ನಾಟಕ ಏಕೀಕರಣದ ಚಳವಳಿಗೆ ಚಾಲನೆ ನೀಡಿ ಅವಿರತ ಹೋರಾಟ ಮಾಡಿದ ಅಂದಾನಪ್ಪ ದೊಡ್ಡಮೇಟಿಯವರು ರಾಜ್ಯದಲ್ಲಿಯೇ ರೋಣ ತಾಲೂಕಿಗೆ ದೊಡ್ಡ ಹೆಸರು ತಂದುಕೊಟ್ಟರು ಎಂದರು.

ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಸರ್ವರನ್ನೂ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಧುರೀಣರಾದ ಮಿಥುನ ಪಾಟೀಲ, ರೋಣ ತಹಸೀಲ್ದಾರ ನಾಗರಾಜ, ಸಿಪಿಐ ಎಸ್.ಎಸ್. ಬೀಳಗಿ, ನರೇಗಲ್ಲ ಪಿಎಸ್‌ಐ ಐಶ್ವರ್ಯ ನಾಗರಾಳ, ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್. ಹುರಳಿ, ವಿ.ಬಿ. ಸೋಮನಕಟ್ಟಿಮಠ, ಜಕ್ಕಲಿ ಗ್ರಾ.ಪಂ ಅಧ್ಯಕ್ಷೆ ಗಂಗಮ್ಮ ಜಂಗಣ್ಣವರ, ಉಪಾಧ್ಯಕ್ಷೆ ಯಲ್ಲವ್ವ ಮಾದರ, ಸರ್ವ ಸದಸ್ಯರು, ದೊಡ್ಡಮೇಟಿ ಮನೆತನದ ರವೀಂದ್ರನಾಥ, ಶಿವನಾಗಪ್ಪ, ಚನ್ನಬಸಪ್ಪ, ಸಂದೇಶ, ಹರ್ಷವರ್ಧನ ದೊಡ್ಡಮೇಟಿ, ಎಚ್.ಎಸ್. ಸೋಂಪೂರ, ಎಂ.ಎಸ್. ದಢೇಸೂರಮಠ, ಮಲ್ಲಣ್ಣ ಮೇಟಿ, ಅಶೋಕಪ್ಪ ಯಾವಗಲ್ಲ, ಮೈಲಾರಪ್ಪ ಚಳ್ಳಮರದ, ಕಸಾಪ ಅಧ್ಯಕ್ಷ ಅಮರೇಶ ಗಾಣಿಗೇರ, ಜಿಲ್ಲಾ ಕಸಾಪ ಕಾರ್ಯದರ್ಶಿ ಕಿಶೋರಬಾಬು ನಾಗರಕಟ್ಟಿ, ತಾಲೂಕಾ ಕಾರ್ಯದರ್ಶಿ ಬಿ.ಬಿ. ಕುರಿ, ಸಾಹಿತಿ ಎಸ್.ಬಿ. ಹಿರೇಮಠ, ಎಂ.ಎಸ್. ಕೋರಿ ಮುಂತಾದವರಿದ್ದರು.

ಅಂದಾನಪ್ಪ ದೊಡ್ಡಮೇಟಿ ಅವರ ಧೀಮಂತ ಹೋರಾಟದ ಸವಿ ನೆನಪಿಗಾಗಿ ಭುವನೇಶ್ವರಿ ತಾಯಿಯ ಮೆರವಣಿಗೆಗೆ ಇಲ್ಲಿಂದಲೇ ಚಾಲನೆ ನೀಡುವ ನಿರ್ಧಾರವನ್ನು ತೆಗೆದುಕೊಂಡಿದ್ದಕ್ಕೆ ಗದಗ ಜಿಲ್ಲಾ ಕಸಾಪಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮತ್ತು ಅವರ ತಂಡದವರನ್ನಲ್ಲದೆ, ತಾಲೂಕಾ ಅಧ್ಯಕ್ಷ ಅಮರೇಶ ಗಾನಿಗೇರ ಅವರ ತಂಡದವರನ್ನೂ ಹೃತ್ಪೂರ್ವಕವಾಗಿ ಅಭಿನಂದಿಸುತ್ತೇನೆ ಎಂದು ಶಾಸಕ ಪಾಟೀಲ ಹೇಳಿದರು.

# ಭುವನೇಶ್ವರಿ ತಾಯಿಗೆ ನರೇಗಲ್ಲದಲ್ಲಿ ಭವ್ಯ ಸ್ವಾಗತ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



10ನೇ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ನಿಮಿತ್ತ ಜಕ್ಕಲಿಯಿಂದ ನರೇಗಲ್ಲಿಗೆ ಆಗಮಿಸಿದ ತಾಯಿ ಭುವನೇಶ್ವರಿ ಮೆರವಣಿಗೆಗೆ ನರೇಗಲ್ಲದ ಕೆಇಬಿ ಕಚೇರಿ ಹತ್ತಿರ ಅದ್ದೂರಿ ಸ್ವಾಗತ ಕೋರಲಾಯಿತು.

ಗಜೇಂದ್ರಗಡ ತಹಸೀಲ್ದಾರ ಕಿರಣಕುಮಾರ ಕುಲಕರ್ಣಿ, ಪ.ಪಂ ಅಧ್ಯಕ್ಷ ಫಕೀರಪ್ಪ ಮಳ್ಳಿ, ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ಡಿ.ಎ. ಅರವಟಗಿಮಠ ಮತ್ತು ಡಾ. ಕೆ.ಬಿ. ಧನ್ನೂರ ಪೂಜೆ ಸಲ್ಲಿಸುವ ಮೂಲಕ ಸ್ವಾಗತ ಕೋರಿದರು.

ಜಕ್ಕಲಿ ಕ್ರಾಸ್ ಮೂಲಕ ಸಾಗಿದ ಮೆರವಣಿಗೆಯು ಹೊಸ ಬಸ್ ನಿಲ್ದಾಣ, ಪಟ್ಟಣ ಪಂಚಾಯಿತಿ, ಕೊಂತಿ ಮಲ್ಲಪ್ಪನ ಗುಡಿ, ಶ್ರೀ ವೀರಭದ್ರೇಶ್ವರ ದೇವಸ್ಥಾನ, ಶ್ರೀ ಗಜಾನನ ದೇವಸ್ಥಾನ, ಹಳೆ ಮಾರುಕಟ್ಟೆ, ದರಗಾ ಓಣಿ, ನಾಗರಕೆರೆ, ಮಾರೆಮ್ಮನ ಗುಡಿ, ಹಳೆ ಬಸ್ ನಿಲ್ದಾಣಕ್ಕೆ ಬಂದು ಗಜೇಂದ್ರಗಡದತ್ತ ಸಾಗಿತು.

ಮೆರವಣಿಗೆಯಲ್ಲಿ ಕಲಾ ತಂಡಗಳು, ಕರಡಿ ಮಜಲು, ಎಲ್ಲ ಶಾಲೆಗಳ ವಿದ್ಯಾರ್ಥಿಗಳು, ಶಿಕ್ಷಕ ವೃಂದದವರು, ಪ.ಪಂ ಸದಸ್ಯರು, ಮುಖ್ಯಾಧಿಕಾರಿ ಮಹೇಶ ನಿಡಶೇಶಿ, ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ, ಹೋಬಳಿ ಘಟಕದ ಅಧ್ಯಕ್ಷ ಎಂ.ವಿ. ವೀರಾಪೂರ, ಜಿಲ್ಲಾ ಮತ್ತು ತಾಲೂಕು ಘಟಕಗಳ ಪದಾಧಿಕಾರಿಗಳು, ಸದಸ್ಯರು, ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ, ರವೀಂದ್ರನಾಥ ದೊಡ್ಡಮೇಟಿ, ನಿಂಗನಗೌಡ ಲಕ್ಕನಗೌಡ್ರ, ಎಂ.ಎಸ್. ದಢೇಸೂರಮಠ, ಶಿಕ್ಷಕ ಎಂ.ಕೆ. ಬೇವಿನಕಟ್ಟಿ ಮುಂತಾದವರಿದ್ದರು.

## ಸಂಗೊಳ್ಳಿ ರಾಯಣ್ಣ ರಾಜ್ಯ ಯುವ ಪ್ರಶಸ್ತಿ ಪ್ರಕಟ



■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟ ಬೆಂಗಳೂರು ಮತ್ತು ಬೆಳಗಾವಿ ಜಿಲ್ಲಾ ಘಟಕ ಕೊಡಮಾಡುವ ಪ್ರತಿಷ್ಠಿತ ಸಂಗೊಳ್ಳಿ ರಾಯಣ್ಣ ರಾಜ್ಯ ಯುವ ಪ್ರಶಸ್ತಿಗೆ ರಾಜ್ಯದ 31 ಜಿಲ್ಲೆಯ 31 ಜನರಿಗೆ ಮತ್ತು ಒಂದು ಸಂಘ ಪ್ರಶಸ್ತಿಯನ್ನು ಘೋಷಣೆ ಮಾಡಿ ರಾಜ್ಯ ಅಧ್ಯಕ್ಷ ಎಸ್.ಬಾಲಾಜಿ ಆದೇಶಿಸಿದ್ದಾರೆ. ಕಲಬುರಗಿ ವಿಭಾಗದ ಕೊಪ್ಪಳದಿಂದ ಶಿಕ್ಷಣ ಕ್ಷೇತ್ರ ಮತ್ತು ಸಮಾಜ ಸೇವೆಗೆ ಸಂಗೀತಾ ಬಿ.ಕಲ್ಲೇಶ ಮೆಣೆದಾಳ, ವಿಜಯನಗರ ಜಿಲ್ಲೆಯಿಂದ ಅಂತಾರಾಷ್ಟ್ರೀಯ ಭರತನಾಟ್ಯ ಕಲಾವಿದೆ ಪಿ.ಅಂಜು, ಬಳ್ಳಾರಿ ಜಿಲ್ಲೆಯಿಂದ ಯುವ ಸಂಘಟನೆ ಮತ್ತು ಸಮಾಜ ಸೇವೆಗೆ ಹನುಮಯ್ಯ ದೊಡ್ಡಬಸಪ್ಪ ಜಿ., ಕಲಬುರಗಿಯಿಂದ ಚನ್ನವೀರ್ ಬಿ.ಕಣ್ಣಿಗಿ, ಬೀದರ ಜಿಲ್ಲೆಯ ರಾಜಕುಮಾರ ಮೋರೆ, ಯಾದಗಿರಿ ಜಿಲ್ಲೆಯ ನಿಂಗಣ್ಣ ದೇವಪ್ಪ ಲಾಠಿ ಮತ್ತು ರಾಯಚೂರ ಜಿಲ್ಲೆಯ ಮಹೇಶ್ ಕುಮಾರ್ ಅವರು ಆಯ್ಕೆಯಾಗಿದ್ದಾರೆ. ಬೆಳಗಾವಿ ಜಿಲ್ಲೆಯ ಮೂಡಲಗಿ ತಾಲೂಕಿನ ಹಳ್ಳೂರಿನ ಇಟ್ಟಪ್ಪ ದೇವರ ರಂಗ ವೇದಿಕೆಯಲ್ಲಿ ಜ.27ರಂದು ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ಯುವ ಸಂಘಗಳ ಒಕ್ಕೂಟದ ಕಲಬುರಗಿ ವಿಭಾಗೀಯ ಸಂಚಾಲಕ ಮಂಜುನಾಥ ಜಿ.ಗೊಂಡಬಾಳ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶತರುದ್ರಾಭಿಷೇಕ ರಾಜೋಪಚಾರ ಪೂಜಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ವಿಶ್ವಾಸವೇ ಬದುಕಿಗೆ ಭದ್ರ ಬುನಾದಿ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಜೀವನದ ಸಮೃದ್ಧಿಗೆ, ಸಮಾಧಾನಕ್ಕೆ ದೈವೀ ಗುಣಗಳು ಕಾರಣವಾಗುತ್ತವೆ. ದೈವೀ ಗುಣಗಳನ್ನು ಸಂರಕ್ಷಿಸುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ದೇವರು, ಧರ್ಮ ನಂಬಿಕೆಯ ಮೇಲೆ ನಿಂತಿವೆ. ಇವುಗಳಲ್ಲಿ ನಂಬಿಕೆ ವಿಶ್ವಾಸ ಕಳೆದುಕೊಳ್ಳಬಾರದು. ವಿಶ್ವಾಸ ಬದುಕಿಗೆ ಭದ್ರ ಬುನಾದಿ ಒದಗಿಸುತ್ತದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಮಂಗಳವಾರ ಶ್ರೀ ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿಗೆ ಶತರುದ್ರಾಭಿಷೇಕ, ರಾಜೋಪಚಾರ ಪೂಜಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮಾನವ ಜೀವನದ ನಿರಂತರ ಹೋರಾಟದಲ್ಲಿ ದೇಹ-ಮನ-ಬುದ್ಧಿ ಮಲಿನವಾಗುವುದುಂಟು. ಅವುಗಳನ್ನು ಶ್ರದ್ಧೆಯಿಂದ ನಿರ್ಮಲಗೊಳಿಸುವತ್ತ ಗಮನವಿರಬೇಕು. ಹುಲ್ಲು ತಿಂದು ಬದುಕುವ ಪ್ರಾಣಿಗಳೆಂದೂ ಸಿರಿ ಸಂಪದಕ್ಕೆ ಆಶೆ



ಮಾಡುವುದಿಲ್ಲ. ಆದರೆ ಅದೇ ಪ್ರಾಣಿಗಳ ಹಾಲನ್ನು ಕುಡಿದ ಮನುಷ್ಯ ದನಗಳ ಹುಲ್ಲನ್ನು ತಿನ್ನಲು ಹಿಂಜರಿಯಲಾರ. ಗುಲಾಬಿ ಗಿಡದಲ್ಲಿ ಹೂವಿದೆ, ಹಸಿರಿದೆ, ಮುಳ್ಳೂ ಇದೆ. ಕೆಲವರ ಲಕ್ಷ್ಯ ಹೂವಿನತ್ತ ಇದ್ದರೆ ಕೆಲವರ ಲಕ್ಷ್ಯ ಮುಳ್ಳಿನತ್ತ ಇರುತ್ತದೆ. ಈ ಜಗತ್ತು ಗುಲಾಬಿ ಕಂಟಿ. ಕೆಲವರು ಹೂವಿನ ಸ್ವರೂಪ ಕಂಡರೆ ಕೆಲವರು ಕುರೂಪವನ್ನೇ ಕಾಣುತ್ತಾರೆ.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಕುಲಪತಿಗಳಾದ ಬೆಳಗಾಲಪೇಟೆ ಹಿರೇಮಠದ ಸಿದ್ಧಲಿಂಗ ಶಾಸ್ತ್ರಿಗಳು ಹಾಗೂ ಗುರುಕುಲ ಸಾಧಕರು ಶತರುದ್ರಾಭಿಷೇಕ-ರಾಜೋಪಚಾರ ಪೂಜಾ ಸಂಕಲ್ಪ ಪೂರ್ವಕ ನೆರವೇರಿಸಿದರು.

ನೋಡುವ ನೋಟ ಚೆನ್ನಾಗಿದ್ದರೆ ಬದುಕು ಸುಂದರವಾಗಿ ಕಾಣುತ್ತದೆ. ಉರಿಯುವ ಹಣತೆ ಮಣ್ಣಿನದಾದರೇನು, ಹೊನ್ನಿನದಾದರೇನು. ಉರಿಯುವ ಜ್ಯೋತಿ ಒಂದೇ. ಜಗತ್ತನ್ನು ನಿರ್ಮಿಸಿದ ಪರಮಾತ್ಮ ಒಬ್ಬನೇ. ಆದರೆ ಹೆಸರುಗಳು ಅನಂತವಾಗಿವೆ. ಶಿವನಿಗೆ ಅಭಿಷೇಕ ಬಹಳ ಪ್ರೀತಿ. ಶಿವನಿಗೆ ಜಲಧಾರೆ-ಕ್ಷೀರಾಭಿಷೇಕ ಮಾಡಿ ಮನುಷ್ಯ ಸಂತೃಪ್ತ ಭಾವನೆ ತಾಳುತ್ತಾನೆ. ದೇವರು ಧರ್ಮ ಮತ್ತು ಗುರುವಿನಲ್ಲಿ ಶ್ರದ್ಧಾ ಮತ್ತು ನಂಬಿಕೆ ಕಳೆದುಕೊಳ್ಳಬಾರದೆಂದು ರಂಭಾಪುರಿ ಶ್ರೀಗಳು ತಿಳಿಸಿದರು.

ಈ ಪೂಜಾ ಸಮಾರಂಭದಲ್ಲಿ ಶ್ರೀ ಪೀಠದ ಆಡಳಿತಾಧಿಕಾರಿ ಎಸ್.ಬಿ. ಹಿರೇಮಠ, ಸಂಪರ್ಕಾಧಿಕಾರಿ ಪ್ರಭುದೇವ ಕಲ್ಮಠ, ಲೆಕ್ಕಾಧಿಕಾರಿ ಸಂಕಪ್ಪನವರ, ಶಿವಪ್ರಕಾಶ ಶಾಸ್ತ್ರಿಗಳು, ಮಧುಕುಮಾರ ಶಾಸ್ತ್ರಿಗಳು, ಚಂದ್ರಶೇಖರಸ್ವಾಮಿ, ರೇಣುಕಸ್ವಾಮಿ, ರವಿ, ರುದ್ರೇಶ, ಗದಿಗೆಯ್ಯ ಹಿರೇಮಠ, ಗಂಗಾಧರ, ಶಿವಕುಮಾರ ಹಿರೇಮಠ, ಕುಮಾರ ಹಿರೇಮಠ ಮೊದಲಾದವರು ಉಪಸ್ಥಿತರಿದ್ದರು.

# ಶೇಂಗಾ ಖರೀದಿ ಕೇಂದ್ರ ಪ್ರಾರಂಭ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಇಲ್ಲಿನ ಎಪಿಎಮ್‌ಸಿ ಮಾರುಕಟ್ಟೆ ಪ್ರಾಂಗಣದಲ್ಲಿ 2024-25ನೇ ಸಾಲಿನ ಬೆಂಬಲ ಬೆಲೆ ಯೋಜನೆಯಡಿ ಶೇಂಗಾ ಖರೀದಿ ಕೇಂದ್ರವನ್ನು ಪ್ರಾರಂಬಿಸಲಾಯಿತು. ರೈತರಿಂದ ಶೇಂಗಾ ಪ್ರತಿ ಕ್ವಿಂಟಲ್ ಗೆ 6783 ರೂಪಾಯಿ ಬೆಂಬಲ ಬೆಲೆಯಡಿ ಖರೀದಿಸಲಿದೆ. ಖರೀದಿಯನ್ನು ಪ್ರತಿ ರೈತರಿಂದ 15 ಕ್ವಿಂಟಾಲ್, ಪ್ರತಿ ಒಂದು ಎಕರೆಗೆ 3 ಕ್ವಿಂಟಾಲ್‌ನಂತೆ ಖರೀದಿಸಲಾಗುತ್ತಿದೆ.

ಈ ಸಂದರ್ಭದಲ್ಲಿ ಕಲಕೇರಿ ಓಜಿಸಿಎಸ್‌ನ ಅಧ್ಯಕ್ಷ ವೆಂಕಪ್ಪ



ಹುಳಕಣ್ಣವರ, ಮುಂಡರಗಿ ಟಿಎಪಿಸಿಎಂಎಸ್ ಅಧ್ಯಕ್ಷ ಮುದುಕನಗೌಡ ಎಸ್.ಪಾಟೀಲ, ಕಲಕೇರಿ ಪಿಎಸಿಎಸ್‌ನ ಅಧ್ಯಕ್ಷ ಶಿವನಗೌಡ ಡೋಣಿ, ಗದಗ ವಿಭಾಗ ಮಟ್ಟದ ಗ್ರಾಹಕರ ಸಹಕಾರ ಸಂಘದ ಅಧ್ಯಕ್ಷ ಎಂ.ಬಿ. ಪಾಟೀಲ, ಎಪಿಎಂಸಿ ಕಾರ್ಯದರ್ಶಿ ರಾಘವೇಂದ್ರ ಜೆ, ಓಜಿಸಿಎಸ್‌ನ ಕಾರ್ಯದರ್ಶಿ ರಾಜಾಭಕ್ಷಿ ಹರ್ಲಾಪೂರ, ರೈತರಾದ ನಿಂಗಪ್ಪ ಬಡಾಲಿ, ಮಂಜಪ್ಪ ಚಿಕ್ಕವಡ್ಡಟ್ಟಿ, ಬಸವರಾಜ್ ರೆಡ್ಡರ್, ಈರಣ್ಣ ಹುಳಕಣ್ಣವರ, ಪಕ್ಕಿರಯ್ಯ ಇಟಗಿಮಠ, ಶೇಕಯ್ಯ ಕೋಡಿಹಳ್ಳಿ, ಹುಚ್ಚಯ್ಯ ಕೋಡಿಹಳ್ಳಿ, ಮುದಕಯ್ಯ ಇಟಗಿಮಠ, ಟಎಪಿಸಿಎಂಎಸ್‌ನ ಕಾರ್ಯದರ್ಶಿ ಎಸ್.ಎಂ. ತಳಕಲ್ಲ, ಸಿಬ್ಬಂದಿಗಳಾದ ಬಸವರಾಜ್ ಯಲಿಗಾರ, ಹೆಚ್.ಕೆ. ಬೆಳಗಟ್ಟಿ, ಐ.ವಿ. ಪುರಾಣಿಕಮಠ ಮುಂತಾದವರಿದ್ದರು.

# ಜ. 23 ರಂದು ನೇರ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗದಗ ವತಿಯಿಂದ ನೇರ ಸಂದರ್ಶನವಿದ್ದು, ಜನವರಿ 23 ರಂದು ಬೆಳಿಗ್ಗೆ 9-30 ಗಂಟೆಗೆ ಚೈತನ್ಯ ಇಂಡಿಯಾ ಫೈನಾನ್ಸ್ ಪ್ರೈವೇಟ್ ಲಿಮಿಟೆಡ್ ಮಾರುತಿ ನಗರ 2ನೇ ಕ್ರಾಸ್, ನರಸಾಪುರ ರೋಡ್ ಬೆಟಗೇರಿ-ಗದಗ ಇಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ಸದರಿ ನೇರ ಸಂದರ್ಶನದಲ್ಲಿ ಚೈತನ್ಯ ಇಂಡಿಯಾ ಫೈನಾನ್ಸ್ ಕ್ರೆಡಿಟ್ ಪ್ರೈವೇಟ್ ಲಿಮಿಟೆಡ್ ಬೆಟಗೇರಿ ಗದಗ ಕಂಪನಿ ಭಾಗವಹಿಸಲಿದೆ.

ನೇರ ಸಂದರ್ಶನದಲ್ಲಿ ಪಾಲ್ಗೊಳ್ಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝರಾಕ್ಸ್ ಪ್ರತಿಗಳು, 2 ರೆಸ್ಯೂಮ್ (ಬಯೋಡಾಟಾ)ಪ್ರತಿಗಳು, ಮತ್ತು ಆಧಾರ್ ಕಾರ್ಡ್ ಝರಾಕ್ಸ್ ನೊಂದಿಗೆ ಭಾಗವಹಿಸಬಹುದು.

ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ, 6363330688, ಕ್ಕೆ ಸಂಪರ್ಕಿಸಲು ಕೋರಲಾಗಿದೆಯೆಂದು ಜಿಲ್ಲಾ ಉದ್ಯೋಗಾಧಿಕಾರಿಯಾದ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ನೋಂದಣಿಯನ್ನು ನೇರ ಸಂದರ್ಶನದ ದಿನದಂದೇ ಮಾಡಿಸಬೇಕಾಗಿರುತ್ತದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಪ್ರಕಟಣೆ ತಿಳಿಸಿದೆ.

### ಪ್ರಯಾಗರಾಜ್ ಮಹಾ ಕುಂಭಮೇಳ ಮುಗಿಸಿ ಮರಳಿದ ಗದುಗಿನ ಪ್ರಥಮ ತಂಡ

# ಕುಂಭಮೇಳದ ಯಶಸ್ವಿ ಯಾತ್ರೆ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಯಾಗರಾಜ್‌ದಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳಕ್ಕೆ ಗದಗ ನಗರದ ಎಪಿಎಂಸಿ ವಾಕಿಂಗ್ ಮಿತ್ರರು ಹಾಗೂ ಗದಗ ಜಿಮಖಾನಾ ಕ್ಲಬ್ ಸದಸ್ಯರಾದ ಚಂದ್ರಶೇಖರ ಸುರಕೋಡ, ಶಂಕ್ರಪ್ಪ ಶಾನಭೋಗರ, ಸಿದ್ರಾಮಪ್ಪ ಉಮಚಗಿ, ಗಂಗಣ್ಣ ಮುನವಳ್ಳಿ, ಸಂಪತ್‌ಕುಮಾರ ಹುಣಸಿಕಟ್ಟಿ, ಕೆ.ಎಸ್. ಕೋರಿಮಠ, ಅಶೋಕ ಪಾಟೀಲ, ಪ್ರಕಾಶ ಉಗಲಾಟದ, ಮುರುಘರಾಜೇಂದ್ರ ಬಡ್ನಿ, ಉಮೇಶ ನಾಲ್ವಾಡ, ಮಧುಸೂಧನ ಪುಣೇಕರ, ಚನ್ನವೀರಪ್ಪ ಹುಣಸಿಕಟ್ಟಿ, ರಾಜು ಮಲ್ಲಾಡದ, ಉಮೇಶ ಹೂಗಾರ, ಸಂಜಯ ಬಾಗಮಾರ, ವಿಜಯಕುಮಾರ ಶಿವಪ್ಪಗೌಡ್ರ ಇವರುಗಳು ಜ.12ರಂದು ಪ್ರಯಾಣ ಬೆಳೆಸಿ ಯಶಸ್ವಿ ಯಾತ್ರೆ ಮುಗಿಸಿ ಮರಳಿದರು.

ಇದರ ಪ್ರಯುಕ್ತ ಗದಗ ನಗರದ ಎಪಿಎಂಸಿಯಲ್ಲಿರುವ ಕಲ್ಮೇಶ್ವರ ಟ್ರೇಡಿಂಗ್ ಕಂಪನಿಯ ಮಾಲಕರು, ಹುಬ್ಬಳ್ಳಿ ಪಿ.ಎಲ್.ಡಿ. ಬ್ಯಾಂಕ್ ಅಧ್ಯಕ್ಷರಾದ ಗಂಗಣ್ಣ ಗಾಣಿಗೇರ ಇವರ ಅಂಗಡಿಯಲ್ಲಿ ಸಭೆಯನ್ನು



ಸೇರಲಾಗಿತ್ತು. ಈ ಸಂದರ್ಭದಲ್ಲಿ ಗಂಗಣ್ಣ ಗಾಣಿಗೇರ ಯಶಸ್ವಿಯಾಗಿ ಪ್ರಯಾಗರಾಜ್ ಪುಣ್ಯಸ್ನಾನ ಮಾಡಿ ಬಂದಿದ್ದಕ್ಕೆ ಪ್ರೀತಿಯ ಭೋಜನದ ವ್ಯವಸ್ಥೆಯನ್ನು ಮಾಡಿ ಅಭಿನಂದನೆ ಸಲ್ಲಿಸಿದರು.

ಗಂಗಾಧರ ಮುನವಳ್ಳಿಯವರು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಚೇಂಬರ್ ಆಫ್ ಕಾಮರ್ಸ್‌ನ ಅಧ್ಯಕ್ಷ ತಾತನಗೌಡ ಪಾಟೀಲ, ಮಾಜಿ ಅಧ್ಯಕ್ಷ ಸಂಗಮೇಶ ದುಂದೂರ, ಶರಣಪ್ಪ ಕುರಡಗಿ, ಎ.ಪಿ.ಎಂ.ಸಿ. ದಲಾಲ ಅಸೋಸಿಯೇಷನ್ ಮಾಜಿ ಅಧ್ಯಕ್ಷ ವಸಂತಗೌಡ ಪೊಲೀಸ್‌ಪಾಟೀಲ, ಶ್ರೀಕಾಂತ ಲಕ್ಕುಂಡಿ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಹನಮಂತಪ್ಪ ಚಟ್ರಿ, ಗದಗ ಜಿಮಖಾನಾ ಸದಸ್ಯರಾದ ಮಲ್ಲಣ್ಣ ದೇಸಾಯಿ, ಆಯ್.ಎಲ್. ಪಾಟೀಲ, ರಾಚಪ್ಪ ವಾಲಿ, ಮೌಲಾಲಿ ಮುಲ್ಲಣ್ಣವರ, ಬಾಪೂಜಿ ಸಂಕನಗೌಡ್ರ, ಪರಶುರಾಮ ಕನ್ಯಾಳ, ಪಂಚಾಕ್ಷರಯ್ಯ ಹಿರೇಮಠ, ಹಾದಿಮನಿ, ವಿಶ್ವನಾಥ ಯಳಮಲಿ, ಮಹಾಂತೇಶಗೌಡ ಪಾಟೀಲ, ಲಿಂಗರಾಜ ಚಿಕ್ಕನಗೌಡ್ರ, ಶಿಧ್ಲಿಂಗಪ್ಪ ಹಲವಾಗಲಿ, ಸುರೇಶ ರಡ್ಡೇರ, ಶರಣು ಗದಗ, ಶರಣಪ್ಪಗೌಡ ಪವಾಡಿಗೌಡ್ರ, ಸಂಗಪ್ಪ ಪೂಜಾರ, ಪ್ರವೀಣ ಹೊರಟಪೇರ, ಶರಣಪ್ಪ ಮಲ್ಲಾಪೂರ, ಚಂಬಣ್ಣ ಮ್ಯಾಗೇರಿ, ಮಹೇಶ ಗಾಣಿಗೇರ ಸೇರಿದಂತೆ ಗದಗ ಎ.ಪಿ.ಎಂ.ಸಿ.ಯ ವ್ಯಾಪಾರಸ್ಥರು, ಕೋಳಿವಾಡ ಗ್ರಾಮದ ಹಿರಿಯರು ಇದ್ದರು.

ಚೇಂಬರ್ ಆಫ್ ಕಾಮರ್ಸ್‌ನ ಮಾಜಿ ಅಧ್ಯಕ್ಷರಾದ ಮಧುಸೂಧನ ಪುಣೇಕರ ಮಾತನಾಡಿ, ಪ್ರಯಾಗರಾಜ್ ಪುಣ್ಯಸ್ನಾನದ ಜೊತೆಗೆ ಅಯೋಧ್ಯೆಯ ಶ್ರೀರಾಮಚಂದ್ರನ ದರ್ಶನ, ಕಾಶಿಯಲ್ಲಿ ವಿಶ್ವನಾಥನ ದರ್ಶನವಾಗಿದೆ ಎಂದರಲ್ಲದೆ, ಪ್ರಯಾಣದ ಸಂದರ್ಭದಲ್ಲಿ ಎಲ್ಲರಿಗೂ ಆರೋಗ್ಯ ತಪಾಸಣೆ ಮಾಡಿದ ಡಾ. ಗೋಡಬೋಲೆಯವರಿಗೆ ಧನ್ಯವಾದ ತಿಳಿಸಿದರು.

# ಗಾಂಧಿ ಕನಸನ್ನು ನನಸಾಗಿಸುವುದು ಇಂದಿನ ಅಗತ್ಯ

▸▸ ಮೊದಲನೇ ಪುಟದಿಂದ

ನೂರು ವರ್ಷಗಳ ಹಿಂದೆ ಕರ್ನಾಟಕದಲ್ಲಿ ನಡೆದ ಎಐಸಿಸಿ ಅಧಿವೇಶನದ ಅಧ್ಯಕ್ಷತೆ ವಹಿಸಿದ್ದು ಮಹಾತ್ಮ ಗಾಂಧಿ. ಆ ದಿನ ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಈ ನೆಲದಲ್ಲಿ ಹೆಚ್ಚಿಸಿದರು. 1924ರ ಕಾಂಗ್ರೆಸ್ ಅಧಿವೇಶನದ ನಿರ್ಣಯಗಳು, ಕೋಲ್ಕತ್ತಾ ಒಪ್ಪಂದ ಮತ್ತು ನೇಯ್ಗೆಯ ಮತಾಧಿಕಾರ, ಸರೋಜಿನಿ ನಾಯ್ಡು ಅವರ ವಿದೇಶಾಂಗ ಸೇವೆ, ಅಕಾಲಿಗಳಿಗೆ ಅಭಿನಂದನೆ, ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳು, ಬರ್ವಾದ ಜನರಿಗೆ ಸಹಾನುಭೂತಿ, ಕೋಹತ್ ಹಾಗೂ ಗುಲಬರ್ಗಾ ಗಲಭೆಗಳು, ಅಸ್ಪೃಶ್ಯತೆ ನಿವಾರಣೆ, ಅಧಿವೇಶನದ ಲೆಕ್ಕಪರಿಶೋಧನೆ ಸೇರಿದಂತೆ ಐತಿಹಾಸಿಕ ಮಾಹಿತಿಗಳು ಹಾಗೂ ಛಾಯಾಚಿತ್ರಗಳನ್ನು 'ಗಾಂಧಿ ಭಾರತ ಮರು ನಿರ್ಮಾಣ' ಹಾಗೂ 'ರಿಕ್ಲೇಮಿಂಗ್ ಗಾಂಧಿ ಭಾರತ್' ಪುಸ್ತಕಗಳು ಒಳಗೊಂಡಿವೆ ಎಂದರು.

ರಾಷ್ಟ್ರದ ಇಂದಿನ ಅಗತ್ಯವೆಂದರೆ, ಗಾಂಧಿ ಆದರ್ಶಗಳನ್ನು ಅನುಸರಿಸುವುದು, ಗಾಂಧಿ ತತ್ವಗಳನ್ನು ಅಳವಡಿಸಿಕೊಳ್ಳುವುದು, ಗಾಂಧಿ ಕನಸನ್ನು ನನಸಾಗಿಸುವುದು ಎಂದು ಸಿದ್ದರಾಮಯ್ಯ ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಂಸದೆ ಪ್ರಿಯಾಂಕಾ ಗಾಂಧಿ, ಕೆ.ಸಿ. ವೇಣುಗೋಪಾಲ್, ರಣದೀಪ್‌ಸಿಂಗ್ ಸುರ್ಜೇವಾಲಾ, ವಿಧಾನಸಭೆ ಉಪಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಸಚಿವರಾದ ಎಚ್.ಕೆ. ಪಾಟೀಲ, ಡಾ. ಜಿ. ಪರಮೇಶ್ವರ, ಸತೀಶ್ ಜಾರಕಿಹೊಳಿ ಸೇರಿದಂತೆ ಹಲವು ನಾಯಕರು ಉಪಸ್ಥಿತರಿದ್ದರು.

# ತಪ್ಪಿದ ಭಾರೀ ಅನಾಹುತ

▸▸ ಮೊದಲನೇ ಪುಟದಿಂದ

ನಾನು ಬೆಳಗ್ಗೆ ಶೌಚಕ್ಕೆಂದು ಹೋಗುತ್ತಿದ್ದಾಗ ಏಕಾಏಕಿ ವಿದ್ಯುತ್ ಕಂಬ, ತಂತಿ ಬಿದ್ದ ಪರಿಣಾಮ ಮೊಣಕಾಲಿಗೆ, ಬೆನ್ನಿಗೆ ಗಾಯಗಳಾಗಿವೆ. ಚರಂಡಿ ಕಾಮಗಾರಿ ಮಾಡುವ ಸಂದರ್ಭದಲ್ಲಿ ವಿದ್ಯುತ್ ಕಂಬಕ್ಕೆ ಧಕ್ಕೆ ಆಗುತ್ತದೆ ಎಂಬ ಅರಿವಿದ್ದರೂ ಚರಂಡಿ ನಿರ್ಮಾಣ ಮಾಡಿರುವುದು ಅವಘಡಕ್ಕೆ ಕಾರಣವಾಗಿದೆ.

**-ಅನಿಲ ಹೊಸಳ್ಳಿ**, ಗಾಯಗೊಂಡವರು.

ಸೋಮವಾರ ಸಂಜೆ ಚರಂಡಿ ಕಾಮಗಾರಿಯ ಹತ್ತಿರದ ವಿದ್ಯುತ್ ಕಂಬ ಬಾಗಿರುವ ಬಗ್ಗೆ ಮಾಹಿತಿ ತಿಳಿದು ಸ್ಥಳಕ್ಕೆ ತೆರಳಿ, ಕಂಬವನ್ನು ಸ್ಥಳಾಂತರಿಸಲು ಪ.ಪಂ ಅಧಿಕಾರಿಗಳಿಗೆ ತಿಳಿಸಲಾಗಿತ್ತು. ಅವರು ಒಪ್ಪಿಗೆಯನ್ನೂ ಸೂಚಿಸಿದ್ದರು. ಮಂಗಳವಾರ ಕಂಬವನ್ನು ಸ್ಥಳಾಂತರ ಮಾಡಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿತ್ತು. ಅಷ್ಟರಲ್ಲಿ ಕಂಬ ಬಿದ್ದಿದೆ. ತಕ್ಷಣವೇ ಕಂಬವನ್ನು ಸ್ಥಳಾಂತರ ಮಾಡಲಾಗುತ್ತದೆ.

**- ವಿರೂಪಾಕ್ಷ ಸರ್ವಿ.**
ಪ್ರಭಾರಿ ಶಾಖಾಧಿಕಾರಿ, ಹೆಸ್ಕಾಂ ನರೇಗಲ್ಲ.

ಕಂಬ ಸ್ಥಳೀಯ ನಿವಾಸಿ ಅನಿಲ ಹೊಸಳ್ಳಿ ಅವರ ಮೇಲೆಯೇ ಬಿದ್ದಿದ್ದು, ಅವರ ಮೊಣಕಾಲು, ಬೆನ್ನಿಗೆ ಗಾಯಗಳಾಗಿವೆ. ಬೆಳಗಿನ ಜಾವದಲ್ಲಿ ಈ ಘಟನೆ ನಡೆದಿದ್ದು, ಹೆಚ್ಚಿನ ಅಪಾಯವಾಗಿಲ್ಲ.

ಇಲ್ಲದಿದ್ದರೆ, ದೊಡ್ಡ ಅನಾಹುತವೇ ಸಂಭವಿಸುತ್ತಿತ್ತು ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ. ಹೆಸ್ಕಾಂ ಮತ್ತು ಪಟ್ಟಣ ಪಂಚಾಯತ ಅಧಿಕಾರಿಗಳ ಸಮನ್ವಯತೆಯ ಕೊರತೆಯಿಂದಾಗಿ ಈ ಅವಘಡ ಸಂಭವಿಸಿದೆ ಎಂಬ ಅಭಿಪ್ರಾಯಗಳು ಕೇಳಿಬಂದಿವೆ.

### ಕನ್ನಡ ಜನಾಭಿವೃದ್ಧಿ ವೇದಿಕೆ ಗದಗ ಜಿಲ್ಲಾ ಘಟಕ, ಮುಂಡರಗಿ ತಾಲೂಕು ಘಟಕಗಳ ಸಂಯೋಜನೆ

# ತಾಲೂಕಾ ಮಟ್ಟದ ರಸಪ್ರಶ್ನೆ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಕನ್ನಡ ಜನಾಭಿವೃದ್ಧಿ ವೇದಿಕೆ ಗದಗ ಜಿಲ್ಲಾ ಘಟಕ ಹಾಗೂ ಮುಂಡರಗಿ ತಾಲೂಕು ಘಟಕದ ಆಶ್ರಯದಲ್ಲಿ ಕರ್ನಾಟಕ-51 ಸಂಭ್ರಾಮಾಚರಣೆ ಹಾಗೂ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ಕನ್ನಡದಲ್ಲಿ ಕನ್ನಡ-ಕರ್ನಾಟಕ ಎಂಬ ರಸ ಪ್ರಶ್ನೆ ಕಾರ್ಯಕ್ರಮವನ್ನು ಮುಂಡರಗಿಯ ಬರದೂರ ಗ್ರಾಮದ ಎನ್.ಎನ್. ಗೋಡಿ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸುಭಾಷ ಕಿತ್ತೂರ ವಹಿಸಿದ್ದರು. ಅಂದಪ್ಪ ಹಾರೋಗೇರಿ ಮತ್ತು ಮಲ್ಲಪ್ಪ ಗೌರಿಪೂರ ಕಾರ್ಯಕ್ರಮ ಉದ್ಘಾಟಿಸಿದರು. ರಸಪ್ರಶ್ನೆ ಕಾರ್ಯಕ್ರಮಕ್ಕೆ ಸಂತೋಷ ಮಸೂತಿ, ಶರಣಪ್ಪ ಕುರಿ ಚಾಲನೆ ನೀಡಿದರು. ಅತಿಥಿಗಳಾಗಿ ಎಲ್.ಬಿ. ಹುಡೇದ, ಗಣೇಶ ಹಾತಲಗೇರಿ, ಉಮೇಶ ಹಿರೇಮಠ, ಅಶೋಕ ಹೊಸಮನಿ, ಪ್ರೊ. ಮಂಜುನಾಥ ಕುರಿ, ಪ್ರಸಾದ ಆಡಿನ, ಸಂತೋಷ ಹಡಪದ, ಪರಶುರಾಮ ತಿಗರಿ ಉಪಸ್ಥಿತರಿದ್ದರು.



ಬಹುಮಾನ ವಿತರಣಾ ಸಮಾರಂಭದಲ್ಲಿ ರೋಣ ಪುರಸಭೆಯ ಮಾಜಿ ಉಪಾಧ್ಯಕ್ಷ ಮಿಥುನ್ ಜಿ.ಪಾಟೀಲ ವಿಜೇತ ತಂಡಗಳಿಗೆ ಬಹುಮಾನ ವಿತರಿಸಿದರು. ಸಂಘದ ಬಗ್ಗೆ ಹುಲ್ಲೇಶ ಎಚ್.ಭಜಂತ್ರಿ ಮಾತನಾಡಿದರು. ಎಲ್.ಬಿ. ಹುಡ್ಡೇದ, ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎಂ. ಫಡ್ನೇಶಿ, ಭುವನೇಶ್ವರಿ ಕಲಕುಟಗರ ಹಾಜರಿದ್ದರು.

ಗಣೇಶ ಹಾತಲಗೇರಿ, ದುರಗಮ್ಮ ತಳಗೇರಿ, ಗಂಗಾಧರ ಅಣ್ಣಿಗೇರಿ, ಎನ್.ಎಂ. ಕೂಕನೂರ, ಎಲ್.ಬಿ. ಹುಡೇದ, ಶರಣಪ್ಪ ಹಳ್ಳಿಕೇರಿ, ಅಮರೇಶ ಹಿರೇಮಠ, ಹೊನ್ನಪ್ಪ ಶಿರಹಟ್ಟಿ, ಉಮೇಶ ಹಿರೇಮಠ, ಸುಭಾಷ ಕಿತ್ತೂರ, ಬಸವರಾಜ ಬಾರಕೇರ, ನೇತ್ರಾವತಿ ಕುರಿ, ನೀಲಮ್ಮ ಹೆಬಸೂರ, ಶಾಂತಾ ನಾಡಗೌಡರ, ಪ್ರಕಾಶ ಸಜ್ಜನ, ಅಶೋಕ ಹೊಸಮನಿ, ಪ್ರಸಾದ ಆಡಿನ್, ಸಂತೋಷ ಹಡಪದ, ಪರಶುರಾಮ ತಿಗರಿ, ಈರಣ್ಣ ಕರಡಿಕೋಳ ಉಪಸ್ಥಿತರಿದ್ದರು. ದಾನೇಶ ಲಮಾಣಿ ಸ್ವಾಗತಿಸಿದರು. ಜಿ.ಎಮ್. ಲಿಂಗಶೆಟ್ಟರ ನಿರೂಪಿಸಿದರು, ಚನ್ನಮ್ಮ ರಿತ್ತಿ ವಂದಿಸಿದರು.

ಗೌಸುಸಾಬ ದೊಟ್ಯಾಹಾಳ, ಶರಣಪ್ಪ ಹಳ್ಳಿಕೇರಿ, ಶರಣಪ್ಪ ಮೈ.ಕುರಿ ಬಹುಮಾನಗಳ ಪ್ರಾಯೋಜಕತ್ವ ವಹಿಸಿದ್ದರು. ಪ್ರಥಮ-ಎನ್.ಎನ್. ಗೊಡಿ ಸರ್ಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಸ್ನೇಹಾ ತಳವಾರ, ಪಲ್ಲವಿ ಹಳ್ಳಿಕೇರಿ, ದ್ವಿತೀಯ-ಕೊರ್ಲಹಳ್ಳಿ ಗ್ರಾಮದ ಕೆ.ಎಚ್. ಕುರಡಗಿ ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಸೌಜನ್ಯ ಚೌಟಗಿ, ಅಬ್ದುಲ್ ನಬಿ ಇಟ್ನಾಳ, ತೃತೀಯ-ಮುಂಡರಗಿ ನಗರದ ಎಫ್.ಎಸ್. ಪ್ರೌಢಶಾಲೆಯ ವಿದ್ಯಾರ್ಥಿಗಳಾದ ಸಂಧ್ಯಾ ಲಮಾಣಿ, ಭೂಮಿಕಾ ಎಂ.ಪಿ ಪಡೆದುಕೊಂಡರು.

## ಸ್ವಾಮಿ ವಿವೇಕಾನಂದ, ಬೋಸ್ ಜಯಂತ್ಯುತ್ಸವ ನಾಳೆ

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕರ್ನಾಟಕ ಬೀದಿ ಬದಿ ವ್ಯಾಪಾರಿ ಸಂಘಟನೆಗಳ ಒಕ್ಕೂಟ ಬೆಂಗಳೂರು ಹಾಗೂ ವಿಕಾಸ ಪ್ರಧಾನಮಂತ್ರಿ ಸಮಾನ ಮನಸ್ಕರ ಗುಂಪು ಮುಳಗುಂದ ಘಟಕ ಹಾಗೂ ವಿವಿಧ ಸಂಘ-ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜ.23ರಂದು ಬೆಳಿಗ್ಗೆ 10.30ಕ್ಕೆ ಪಟ್ಟಣದ ಗಾಂಧಿ ಕಟ್ಟೆ ಹತ್ತಿರದ ವಾಣಿಜ್ಯ ಮಳಿಗೆ ಮೇಲುಗಡೆ ಸ್ವಾಮಿ ವಿವೇಕಾನಂದರ 162ನೇ ಹಾಗೂ ಸುಭಾಷಚಂದ್ರ ಬೋಸ್‌ರ 128ನೇ ಜಯಂತ್ಯುತ್ಸವ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮದ ಜರುಗಲಿದೆ.

ಸಾನ್ನಿಧ್ಯವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಅಧ್ಯಕ್ಷತೆಯನ್ನು ಭೀಮಪ್ಪ ಕೋಳಿ ವಹಿಸುವರು. ಪ.ಪಂ ಸದಸ್ಯ ಎಸ್.ಸಿ. ಬಡ್ನಿ, ಪ.ಪಂ ಅಧ್ಯಕ್ಷೆ ಎಲ್ಲವ್ವ ಕವಲೂರ, ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ, ವಾಣಿಶ್ರೀ ನಿರಂಜನ, ಬಿ.ಎಂ. ಹರಪನಹಳ್ಳಿ, ಡಾ. ಎಸ್.ಸಿ. ಚವಡಿ, ಪ್ರಕಾಶ ಮದ್ದಿನ, ವಿ.ಡಿ. ಕಣವಿ, ದೀಪಾ ಬಡಿಗೇರ, ನಾಗಪ್ಪ ಚಳಗೇರಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಸರಕಾರಿ ಕಚೇರಿಯಲ್ಲಿ ಮಹಿಳೆ ಮೇಲೆ ಹಲ್ಲೆ ನಡೆಸಿದ ಅಧಿಕಾರಿ ಸಸ್ಪೆಂಡ್

■ ವಿಜಯಸಾಕ್ಷಿ ಸುದ್ದಿ, ಮಧ್ಯಪ್ರದೇಶ

ಮಧ್ಯಪ್ರದೇಶದ ಭಿಂಡ್ ಜಿಲ್ಲೆಯ ತಹಶೀಲ್ದಾರ್ ಕಚೇರಿಯಲ್ಲಿ ಮಹಿಳೆಯೊಬ್ಬರಿಗೆ ಕಂದಾಯ ಇಲಾಖೆಯ ಉದ್ಯೋಗಿಯೊಬ್ಬರು ಥಳಿಸುತ್ತಿರುವ ವಿಡಿಯೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆದ ಬಳಿಕ ಅಮಾನತುಗೊಳಿಸಲಾಗಿದೆ.

**ಅವ್ವ ಸೇವಾ ಟ್ರಸ್ಟ್ ನೀಡಿದ ಹೆಚ್ಚುವರಿ 3 ಲಕ್ಷ ರೂ ದತ್ತಿನಿಧಿ ಸ್ವೀಕರಿಸಿದ –ಡಾ.ತೋಂಟದ ಸಿದ್ಧರಾಮ ಶ್ರೀಗಳ ಆಶೀರ್ವಚನ**

# 'ಅವ್ವ ಟ್ರಸ್ಟ್' ತಾಯಿಯ ಮಹತ್ವ ಹೆಚ್ಚಿಸಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಲಿಂಗಾಯತ ಪ್ರಗತಿಶೀಲ ಸಂಘದಲ್ಲಿ ಸಭಾಪತಿ ಬಸವರಾಜ ಹೊರಟ್ಟಿಯವರ ನೇತೃತ್ವದ ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿದ ದತ್ತಿನಿಧಿಯಿಂದ ಅವ್ವನ ಮಹತ್ವ ಹಾಗೂ ಗೌರವ ಹೆಚ್ಚಿಸುವಲ್ಲಿ ಮತ್ತು ಸಮಾಜದಲ್ಲಿ ಹೆತ್ತವರ ಬಗ್ಗೆ ಅರಿವು ಮೂಡಿಸಲು ಸಾಕಷ್ಟು ಪ್ರೇರಕ ಶಕ್ತಿಯಾಗಿದೆ ಎಂದು ಜಗದ್ಗುರು ತೋಂಟದಾರ್ಯ ಮಠದ ಪೀಠಾಧಿಪತಿಗಳಾದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಅಭಿಪ್ರಾಯಪಟ್ಟರು.

ಅವರು ಲಿಂಗಾಯತ ಪ್ರಗತಿಶೀಲ ಸಂಘದ ಆಶ್ರಯದಲ್ಲಿ ನಗರದ ತೋಂಟದಾರ್ಯ ಮಠದ ಆವರಣದಲ್ಲಿ ನಡೆದ ಶಿವಾನುಭವದ ಸಾನ್ನಿಧ್ಯ ವಹಿಸಿ, ಅವ್ವ ಸೇವಾ ಟ್ರಸ್ಟ್‌ನವರು ಹೆಚ್ಚುವರಿಯಾಗಿ ನೀಡಿದ 3 ಲಕ್ಷ ರೂಪಾಯಿಗಳ ದತ್ತಿನಿಧಿ ಚೆಕ್‌ನ್ನು ಸಂಚಾಲಕರಾದ ಡಾ.ಬಸವರಾಜ ಧಾರವಾಡ ಅವರಿಂದ ಸ್ವೀಕರಿಸಿ ಮಾತನಾಡಿ, ಅವ್ವ ಸೇವಾ ಟ್ರಸ್ಟ್‌ನವರು ಈಗಾಗಲೇ ಕಳೆದ 4 ವರ್ಷಗಳ ಹಿಂದೆ 1 ಲಕ್ಷ 10 ಸಾವಿರ ರೂಪಾಯಿಗಳನ್ನು ನೀಡಿ ದತ್ತಿನಿಧಿ ಸ್ಥಾಪಿಸುವ ಮೂಲಕ ಪ್ರತಿವರ್ಷ ಗುರವ್ವ



ಶಿವಲಿಂಗಪ್ಪ ಹೊರಟ್ಟಿಯವರ ಸ್ಮರಣಾರ್ಥ ಅವ್ವನ ಕುರಿತು ನಡೆಯುವ ವಿಶೇಷ ಶಿವಾನುಭವದಲ್ಲಿ ಹೆತ್ತವರ ಮಹತ್ವದ ಅರಿವು ಮೂಡಿಸುವ ಕಾರ್ಯಕ್ಕೆ ಈ ದತ್ತಿನಿಧಿ ಸಾಕಷ್ಟು ಪ್ರೇರಕ ಶಕ್ತಿಯಾಗಿದೆ.

ಲಿಂಗಾಯತ ಪ್ರಗತಿಶೀಲ ಸಂಘದ ಕಾರ್ಯಗಳನ್ನು ಮೆಚ್ಚಿ ಬಸವರಾಜ ಹೊರಟ್ಟಿಯವರು ಮತ್ತೆ ಹೆಚ್ಚುವರಿಯಾಗಿ ಟ್ರಸ್ಟ್‌ಗೆ 3 ಲಕ್ಷ ರೂಪಾಯಿಗಳನ್ನು ನೀಡುವ ಮೂಲಕ ಇನ್ನಷ್ಟು ಕಾರ್ಯಗಳನ್ನು ಮಾಡಲು ಸಹಕರಿಸಿದ್ದು ಅಭಿನಂದನಾರ್ಹ. ಟ್ರಸ್ಟ್ ಹತ್ತಾರು ವಿಧಾಯಕ ಕಾರ್ಯಕ್ರಮಗಳನ್ನು ಮಾಡುವ ಮೂಲಕ ನಾಡಿನಲ್ಲಿ ಒಂದು ವಿಶೇಷ ಸಮಾಜಮುಖಿ ಟ್ರಸ್ಟ್ ಆಗಿ ಹೊರಹೊಮ್ಮಿದೆ. ಆ ಟ್ರಸ್ಟ್ ಮೂಲಕ ಇನ್ನಷ್ಟು ಅರ್ಥಪೂರ್ಣ ಕಾರ್ಯಕ್ರಮಗಳು ನಡೆಯುವಂತಾಗಲಿ ಎಂದು ನುಡಿದರು.

ಈ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ ಸುಧಾರಣೆಗಾಗಿ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗಮಿಸಿದ್ದ ಡಿ.ಡಿ.ಪಿ.ಆಯ್. ಆರ್.ಎಸ್. ಬುರಡಿ, ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮಂಗಳಾ ತಾಪಸ್ಕರ, ವಿ.ವಿ. ನಡುವಿನಮನಿ, ದಾಸೋಹ ಸೇವೆ ಸಲ್ಲಿಸಿದ ಚಂದ್ರಶೇಖರ ಅಂಗಡಿ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಶಿವಾನುಭವ ಸಮಿತಿಯ ಚೇರಮನ್ ಆಯ್.ಬಿ. ಬೆನಕೊಪ್ಪ, ಸಹ ಚೇರಮನ್ ಶಿವಾನಂದ ಹೊಂಬಳ ಮುಂತಾದವರು ಉಪಸ್ಥಿತರಿದ್ದರು. ವಿದ್ಯಾ ಪ್ರಭು ಕಾರ್ಯಕ್ರಮ ನಿರೂಪಿಸಿದರು.

ಅವ್ವ ಸೇವಾ ಟ್ರಸ್ಟ್ ಸಂಚಾಲಕರಾದ ಡಾ.ಬಸವರಾಜ ಧಾರವಾಡ ಲಿಂಗಾಯತ ಪ್ರಗತಿಶೀಲ ಸಂಘದ ಪದಾಧಿಕಾರಿಗಳಿಗೆ 3 ಲಕ್ಷ ರೂಪಾಯಿಗಳ ಚೆಕ್ಕನ್ನು ಹಸ್ತಾಂತರಿಸಿ ಮಾತನಾಡಿ, ಕಳೆದ 14 ವರ್ಷಗಳಿಂದ ಸಭಾಪತಿ ಬಸವರಾಜ ಹೊರಟ್ಟಿಯವರ ನೇತೃತ್ವದ ಅವ್ವ ಸೇವಾ ಟ್ರಸ್ಟ್ ಅಸಹಾಯಕರಿಗೆ ಆಸರೆಯಾಗಿ, ಪ್ರತಿಭಾವಂತರಿಗೆ ಪ್ರೇರಕ ಶಕ್ತಿಯಾಗಿ, ಎಲ್ಲ ವರ್ಗದ ನೊಂದವರಿಗೆ ಅಭಯದ ಹಸ್ತ ಚಾಚುತ್ತ ಬರುವ ಮೂಲಕ ಅವ್ವ ಪ್ರೀತಿಯನ್ನು ಹಂಚಿದೆ. ಇತ್ತೀಚೆಗೆ ಹೆತ್ತವರ ಬಗ್ಗೆ ಉದಾಸೀನ ತಾಳುತ್ತಿರುವ ಬಗ್ಗೆ ಹೆತ್ತವರ ಮಹತ್ವದ ಅರಿವು ಮೂಡಿಸುವ ಮಹತ್ವದ ಕಾರ್ಯವನ್ನು ನಾಡಿನಾದ್ಯಂತ ಮಾಡುತ್ತಾ ಬಂದಿದೆ. ಶ್ರೀಮಠದಲ್ಲಿ ಸ್ಥಾಪಿಸಿದ ದತ್ತಿನಿಧಿ ಟ್ರಸ್ಟ್ ಬಳಗಕ್ಕೆ ಸಾರ್ಥಕತೆಯನ್ನು ತಂದಿದೆ ಎಂದರು.

# ಸಮಾಜಘಾತಕ ಶಕ್ತಿಗಳ ವಿರುದ್ಧ ಗಂಭೀರ ಕ್ರಮ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಮಹಿಳೆಯರಿಗೆ ರಕ್ಷಣೆ ದೊರಕಬೇಕು. ಬಲಾತ್ಕಾರದಂತಹ ಹೀನ ಕೃತ್ಯಗಳು ನಡೆಯಬಾರದು. ಸಮಾಜದಲ್ಲಿ ಸಮಾಜಘಾತಕ ಶಕ್ತಿಗಳು ಇಂಥಹ ಕೆಲಸ ಮಾಡುತ್ತವೆ. ಅವರ ವಿರುದ್ಧ ಗಂಭೀರ ಕ್ರಮ ಜರುಗಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಎಚ್ಚರಿಕೆ ನೀಡಿದರು.

ಅವರು ಮಂಗಳವಾರ ಬೆಳಗಾವಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಇಡೀ ವರ್ಷ ಜೈ ಬಾಪು, ಜೈ ಭೀಮ್, ಜೈ ಸಂವಿಧಾನ ಅಭಿಯಾನವನ್ನು ಮಾಡುತ್ತಿದ್ದೇವೆ.



ಗಾಂಧೀಜಿಯವರ ತತ್ವಾದರ್ಶಗಳನ್ನು ಮತ್ತೆ ಸ್ಥಾಪಿಸಲು ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಗಾಂಧೀಜಿ ಹಾಗೂ ಅವರ ವಿಚಾರಧಾರೆಗಳು ಇಡೀ ವಿಶ್ವಕ್ಕೆ ಇಂದಿಗೂ ಪ್ರಸ್ತುತವಾಗಿವೆ. ಗಾಂಧೀಜಿ ಸೌಹಾರ್ದತೆ, ಸಮಾನತೆ ಬರಬೇಕು, ಅಸ್ಪೃಶ್ಯತೆ ಹೋಗಲಾಡಿಸಲು, ಮಹಿಳೆಯರಿಗೆ ಅವರ ಹಕ್ಕುಗಳ ರಕ್ಷಣೆಯಾಗಬೇಕೆಂದು ಪ್ರತಿಪಾದಿಸಿದ್ದರು. ಗಾಂಧೀಜಿ, ಬಸವಣ್ಣ, ಕನಕದಾಸರ ವಿಚಾರಗಳು ಸಂವಿಧಾನದಲ್ಲಿ ಅಡಕವಾಗಿವೆ ಎಂದರು.

ಗಾಂಧೀಜಿ, ಅಂಬೇಡ್ಕರ್ ಮತ್ತು ಸಂವಿಧಾನವನ್ನು ವಿರೋಧಿಸುವ ಅನಾಹುತಕಾರಿ ರಾಜಕಾರಣ ನಡೆಯುತ್ತಿದೆ. ಅದ್ದರಿಂದ ಇವುಗಳ ರಕ್ಷಣೆ ಮಾಡುವುದು ಕಾಂಗ್ರೆಸ್‌ನ ಜವಾಬ್ದಾರಿ. ನಾವು ಸಂವಿಧಾನದ ಪರವಾಗಿದ್ದೇವೆ. ಅವರು ಮನುವಾದದ ಪರವಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅನಾರೋಗ್ಯದ ಕಾರಣ ಅಧಿವೇಶನಕ್ಕೆ ಹಾಜರಾಗಲು ಸಾಧ್ಯವಾಗಿಲ್ಲ ಎಂದು ಮುಖ್ಯಮಂತ್ರಿಗಳು ತಿಳಿಸಿದರು. ಅವರು ಸಮಾವೇಶದಿಂದ ದೂರ ಎಂದು ಮಾಧ್ಯಮಗಳು ವರದಿ ಮಾಡಿವೆ. ಈ ರೀತಿ ತಿರುಚಿ ಸುದ್ದಿ ಹಾಕಿದರೆ ಪತ್ರಿಕಾ ವೃತ್ತಿಯ ಘನತೆ ಉಳಿಯುತ್ತದೆಯೇ, ಇದರಿಂದ ಏನು ಸಂದೇಶ ಹೋಗುತ್ತದೆ ಎಂದು ಪ್ರಶ್ನಿಸಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕಾರ್ಯಕಾರಿ ಸಮಿತಿ ಸದಸ್ಯರು, ಕಾರ್ಯದರ್ಶಿಗಳು ಆಗಮಿಸಲಿದ್ದಾರೆ ಎಂದು ಸಿಎಂ ಇದೇ ಸಂದರ್ಭದಲ್ಲಿ ತಿಳಿಸಿದರು.

## ಅಂಬಿಗರ ಚೌಡಯ್ಯನವರ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಸುಣಗಾರ ಓಣಿಯಲ್ಲಿ ಗದಗ ಜಿಲ್ಲಾ ನಿಜಶರಣ ಅಂಬಿಗರ ಚೌಡಯ್ಯ ಸಮಾಜದ ವತಿಯಿಂದ ನಿಜಶರಣ ಅಂಬಿಗರ ಚೌಡಯ್ಯನವರ 905ನೇ ಜಯಂತಿಯನ್ನು ಆಚರಿಸಲಾಯಿತು.

ಸಭೆಯ ಅಧ್ಯಕ್ಷತೆಯನ್ನ ಸಮಾಜ ಜಿಲ್ಲಾಧ್ಯಕ್ಷ ರಾಮಣ್ಣ ಇರಕಲ್ಲ ವಹಿಸಿ ಮಾತನಾಡಿದರು. ಪ್ರಧಾನ ಕಾರ್ಯದರ್ಶಿ ಸಂಗಮೇಶ ಹಾದಿಮನಿ ಸರ್ವರನ್ನೂ ಸ್ವಾಗತಿಸಿದರು. ಈ ಸಂದರ್ಭದಲ್ಲಿ ಕೆಪಿಸಿಸಿ ಮೀನುಗಾರರ ಜಿಲ್ಲಾಧ್ಯಕ್ಷ ಗುರಪ್ಪ ತಿರ್ಲಾಪೂರ, ಅಮಿತ ಪೂಜಾರ, ಬಸವರಾಜ ಗುಡಿಸಾಗರ, ಮಹಿಳಾ ಅಧ್ಯಕ್ಷೆ ಸುಜಾತ ಗುಡಿಸಾಗರ, ಗಿರಿಜಾ ಬಾರಕೇರ, ಕವಿತಾ ಗುಡಿಸಾಗರ, ರವಿಕುಮಾರ ಗುಡಿಸಾಗರ, ರಾಜೂ ಪೂಜಾರ, ಮಧು ಪೂಜಾರ, ಮಂಜುನಾಥ ಗುಡಿಸಾಗರ, ಸುನೀಲ ಬಾರಕೇರ, ಮುತ್ತು ಲಕ್ಕುಂಡಿ, ಹನಮಂತ ಸುಣಗಾರ, ಮಹಾಂತೇಶ ಬಾರಕೇರ ಸೇರಿದಂತೆ ಯುವಕರು ಹಾಗೂ ಹಿರಿಯರು ಭಾಗವಹಿಸಿದ್ದರು.

**ನಾವು ಸಂವಿಧಾನ ರಕ್ಷಿಸಿದರೆ, ಸಂವಿಧಾನ ನಮ್ಮೆಲ್ಲರನ್ನೂ ರಕ್ಷಿಸುತ್ತದೆ: ಸಿ.ಎಂ ವಿಶ್ಲೇಷಣೆ**

## ಚುನಾವಣೆ ಗೆಲ್ಲುವುದಕ್ಕಿಂತ ನಮ್ಮ ಸಿದ್ಧಾಂತ ಗೆಲ್ಲಬೇಕು

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಸಂವಿಧಾನ ದ್ವೇಷಿಯಾಗಿರುವ ಆರ್‌ಎಸ್‌ಎಸ್ ಸಿದ್ಧಾಂತವನ್ನು ಬಿಜೆಪಿಯು ಭಾರತೀಯರ ಮೇಲೆ ಹೇರುತ್ತಿದ್ದು, ಇದನ್ನು ಹಿಮ್ಮೆಟ್ಟಿಸೋಣ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ ನೀಡಿದರು.

ಬೆಳಗಾವಿಯಲ್ಲಿ ಮಂಗಳವಾರ ಐತಿಹಾಸಿಕ ಜೈ ಬಾಪು-ಜೈ ಭೀಮ್-ಜೈ ಸಂವಿಧಾನ ಅಭಿಯಾನ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಿಜೆಪಿ ಪರಿವಾರ ಭಾರತದಲ್ಲಿ ಬಹಳ ವ್ಯವಸ್ಥಿತವಾಗಿ ಒಡಕು ತರುತ್ತಿದೆ. ಭಾರತೀಯರ ನಡುವೆ ಬಿರುಕು ಮೂಡಿಸುತ್ತಾ ಭಾರತವನ್ನು ದುರ್ಬಲಗೊಳಿಸುತ್ತಿದೆ. ಬಿಜೆಪಿಯ ಈ ಯತ್ನವನ್ನು ನಾವು ಸೋಲಿಸಬೇಕು. ಇದಕ್ಕೆ ಗಾಂಧಿ-ಅಂಬೇಡ್ಕರ್ ನಮಗೆ ಮಾರ್ಗದರ್ಶಕರು ಎಂದರು.

ಸಂವಿಧಾನ ಜಾರಿಯಾದಾಗ



ಬಿಜೆಪಿ ಪರಿವಾರ ಅಂಬೇಡ್ಕರ್ ಭಾವಚಿತ್ರವನ್ನು, ಸಂವಿಧಾನವನ್ನು ಸುಟ್ಟಿತ್ತು. ಇದನ್ನು ಈ ದೇಶ, ಈ ದೇಶದ ಜನ ಸಮುದಾಯ ಯಾವತ್ತೂ ಕ್ಷಮಿಸುವುದಿಲ್ಲ, ಮರೆಯುವುದಿಲ್ಲ. ಬಿಜೆಪಿ ಪರಿವಾರ ಗಾಂಧಿ, ಅಂಬೇಡ್ಕರ್‌ರನ್ನು ದ್ವೇಷಿಸುತ್ತದೆ. ನಾವು ಇಬ್ಬರ ಆಶಯಗಳನ್ನೂ ಪೀಳಿಗೆಯಿಂದ ಪೀಳಿಗೆಗೆ ದಾಟಿಸುತ್ತೇವೆ, ವಿಸ್ತರಿಸುತ್ತೇವೆ ಎಂದರು.

ನಾವು ಸಂವಿಧಾನ ರಕ್ಷಿಸಿದರೆ ಅದೇ ಸಂವಿಧಾನ ನಮ್ಮೆಲ್ಲರನ್ನೂ ರಕ್ಷಿಸುತ್ತದೆ. ನಮಗೆ ಚುನಾವಣೆ ಗೆಲ್ಲುವುದಕ್ಕಿಂತ ನಮ್ಮ ಸಿದ್ಧಾಂತ ಗೆಲ್ಲಬೇಕು. ಅದು ಮಾತ್ರ ನಮ್ಮ ನಿಜವಾದ ಗೆಲುವು. ಗಾಂಧಿ, ಅಂಬೇಡ್ಕರ್ ಅವರ ಆಶಯಗಳು, ಮೌಲ್ಯಗಳ ಈಡೇರಿಕೆಗೆ ನಾವು ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡಿದ್ದೇವೆ. ಇದಕ್ಕಾಗಿ ಬಜೆಟ್‌ನಲ್ಲಿ 52 ಸಾವಿರ ಕೋಟಿಗೂ ಅಧಿಕ ಮೊತ್ತದ ಹಣವನ್ನು ನೇರವಾಗಿ ಜನರ ಖಾತೆಗೆ ಹಾಕಿ ರಾಜ್ಯದ ಜನರನ್ನು ಆರ್ಥಿಕವಾಗಿ ಸಬಲರನ್ನಾಗಿಸಿದ್ದೇವೆ ಎಂದರು.

# 'ಗಾಂಧಿ ಭಾರತ ಮರು ನಿರ್ಮಾಣ' ಪುಸ್ತಕ ಬಿಡುಗಡೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ

1924ರಲ್ಲಿ ಬೆಳಗಾವಿಯಲ್ಲಿ ಮಹಾತ್ಮ ಗಾಂಧೀಜಿಯವರ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಅಧಿವೇಶನದ ಸಂದರ್ಭದಲ್ಲಿ ಕೈಗೊಂಡ ನಿರ್ಣಯಗಳು, ಅಧ್ಯಕ್ಷೀಯ ಭಾಷಣ ಮತ್ತಿತರ ಮಾಹಿತಿಗಳು ಹಾಗೂ ಅಪರೂಪದ ಛಾಯಾಚಿತ್ರಗಳನ್ನು ಒಳಗೊಂಡು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಪ್ರಕಟಿಸಿರುವ 'ಗಾಂಧಿ ಭಾರತ ಮರು ನಿರ್ಮಾಣ' ಹಾಗೂ Reclaiming Gandhi Bharath ಕನ್ನಡ ಹಾಗೂ ಆಂಗ್ಲ ಪುಸ್ತಕಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಬಿಡುಗಡೆ ಮಾಡಿದರು.

ಸುವರ್ಣ ಸೌಧದ ಆವರಣದಲ್ಲಿ ಸ್ಥಾಪಿಸಿರುವ ಬೃಹತ್ ಗಾಂಧಿ ಪುತ್ಥಳಿ ಅನಾವರಣ ಸಮಾರಂಭದಲ್ಲಿ ಈ ಕೃತಿಗಳನ್ನು ಲೋಕಾರ್ಪಣೆ



ಮಾಡಲಾಯಿತು.

1924ರ ಕಾಂಗ್ರೆಸ್ ಅಧಿವೇಶನದ ನಿರ್ಣಯಗಳು, ಕೊಲ್ಕತ್ತಾ ಒಪ್ಪಂದ ಮತ್ತು ನೇಯ್ಗೆಯ ಮತಾಧಿಕಾರ, ಸರೋಜಿನಿ ನಾಯ್ಡು ಅವರ ವಿದೇಶಾಂಗ ಸೇವೆ, ಅಕಾಲಿಗಳಿಗೆ ಅಭಿನಂದನೆ, ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳು, ಬರ್ಮಾದ ಜನರಿಗೆ ಸಹಾನುಭೂತಿ, ಕೋಹತ್ ಹಾಗೂ ಗುಲಬರ್ಗಾ ಗಲಭೆಗಳು, ಅಸ್ಪೃಶ್ಯತೆ ನಿವಾರಣೆ, ಅಧಿವೇಶನದ ಲೆಕ್ಕಪರಿಶೋಧನೆ ಸೇರಿದಂತೆ ಐತಿಹಾಸಿಕ ಮಾಹಿತಿಗಳು ಹಾಗೂ ಛಾಯಾಚಿತ್ರಗಳನ್ನು ಈ ಪುಸ್ತಕಗಳು ಒಳಗೊಂಡಿವೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಿಧಾನಸಭಾಧ್ಯಕ್ಷ ಯು.ಟಿ. ಖಾದರ್, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಂಸದರಾದ ಪ್ರಿಯಾಂಕಾ ಗಾಂಧಿ, ಕೆ.ಸಿ. ವೇಣುಗೋಪಾಲ, ರಣದೀಪ್‌ಸಿಂಗ್ ಸುರ್ಜೇವಾಲಾ, ವಿಧಾನಸಭೆ ಉಪಸಭಾಧ್ಯಕ್ಷ ರುದ್ರಪ್ಪ ಲಮಾಣಿ, ಸಚಿವರಾದ ಎಚ್.ಕೆ. ಪಾಟೀಲ, ಡಾ. ಜಿ. ಪರಮೇಶ್ವರ, ಸತೀಶ ಜಾರಕಿಹೊಳಿ ಮತ್ತಿತರ ಗಣ್ಯರು ವೇದಿಕೆಯಲ್ಲಿದ್ದರು.

## ಜ.24ಕ್ಕೆ 'ಶಿವಯೋಗಿ ಶ್ರೀಸಿದ್ಧರಾಮೇಶ್ವರ' ಚಿತ್ರ ತೆರೆಗೆ




■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಓಂಕಾರ ಮೂವೀಸ್ ಬೆಂಗಳೂರು, ಸುಜಾತಾ ರಾಜ್‌ಕುಮಾರ್ ಅರ್ಪಿಸುವ ಪುರುಷೋತ್ತಮ್ ಓಂಕಾರ್ ಸ್ವಾಮಿಯವರ ದಕ್ಷ ನಿರ್ದೇಶನದಲ್ಲಿ ಮೂಡಿಬಂದಿರುವ 'ಶಿವಯೋಗಿ ಶ್ರೀ ಸಿದ್ಧರಾಮೇಶ್ವರ' ಭಕ್ತಿಪ್ರಧಾನ ಕನ್ನಡ ಚಲನಚಿತ್ರದ ಪತ್ರಿಕಾಗೋಷ್ಠಿ ಹುಬ್ಬಳ್ಳಿಯ ಪತ್ರಿಕಾ ಭವನದಲ್ಲಿ ಜರುಗಿತು.

ಚಿತ್ರದಲ್ಲಿ ನಾಯಕ ನಟರಾಗಿ ಉತ್ತರ ಕರ್ನಾಟಕದ ಬೈಲಹೊಂಗಲ ತಾಲೂಕಿನ ಯುವ ಪ್ರತಿಭೆಯಾದ ರಾವಣ ಕತ್ತಿಯವರು ಸಿದ್ಧರಾಮೇಶ್ವರನಾಗಿ ಅಭಿನಯಿಸಿದ್ದಾರೆ. ಮೊದಲ ಬಾರಿಗೆ ಒಂದು ಪೌರಾಣಿಕ ಕಥೆಯನ್ನು ಈಗಿನ ಕಾಲದ ತಾಂತ್ರಿಕತೆಯೊಂದಿಗೆ ಸಿದ್ಧಪಡಿಸಲಾಗಿದ್ದು, ಸಿದ್ಧರಾಮೇಶ್ವರ ಪವಾಡಗಳೊಂದಿಗೆ ಮನರಂಜನೆಯನ್ನು ಹೊಂದಿದೆ. ಈಗಿನ ಕಾಲದ ಜನರಿಗೆ ಶರಣರ ಸಂಗತಿಗಳನ್ನು ಮನರಂಜನಾತ್ಮಕವಾಗಿ ಮುಟ್ಟಿಸಲು ಎನ್.ಎಸ್. ರಾಜಕುಮಾರ್ ಅವರು ಚಿತ್ರಕ್ಕೆ ಬಂಡವಾಳವನ್ನು ಹೂಡಿಕೆ ಮಾಡಿದ್ದು, ಸಹ ನಿರ್ಮಾಪಕರಾಗಿ ಜೆ.ಕೆ. ಸುನಿಲ್ ಕುಮಾರ್ ಕೈಜೋಡಿಸಿದ್ದಾರೆ.

ಈ ಚಿತ್ರದಲ್ಲಿ ಎರಡು ಹಾಡುಗಳು ಹಾಗೂ ನಾಲ್ಕು ವಚನಗಳಿದ್ದು, ಚಿತ್ರಕ್ಕೆ ಸಂಗೀತ ಸಂಯೋಜನೆ ರಾಜ್ ಭಾಸ್ಕರ್ ಮಾಡಿದ್ದಾರೆ. ಛಾಯಾಗ್ರಹಣ ಗೌರಿ ವೆಂಕಟೇಶ್, ಚಿತ್ರದ ಎಡಿಟಿಂಗ್ ಹಾಗೂ ಗ್ರಾಫಿಕ್ಸ್ ಕಾರ್ಯ ಆರ್. ಅನಿಲ್ ಕುಮಾರ್, ಪತ್ರಿಕಾಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ್ ಹಂಡಗಿ ಅವರದಿದೆ. ಮುಖ್ಯ ತಾರಾಗಣದಲ್ಲಿ ರಾವಣ ಕತ್ತಿ, ಗಣೇಶ್ ರಾವ್ ಕೇಸರಕರ್, ನಾಗೇಂದ್ರ ಅರಸು, ಬಸವರಾಜ್ ರಕ್ಷಾಗೌಡ, ಅನ್ನಪೂರ್ಣ, ಪ್ರಮೀಳಾ ಸುಬ್ರಹ್ಮಣ್ಯ, ಬಾಲಕ ಸಿದ್ಧರಾಮನಾಗಿ ಮಾ.ಸಮರ್ಥ, ಬಸವರಾಜ ಮುಂತಾದವರು ಅಭಿನಯಿಸಿದ್ದಾರೆ.


ಈ ಚಿತ್ರವು ಜ. 24ರಂದು ರಾಜ್ಯಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗುತ್ತಿದೆ ಎಂದು ನಿರ್ದೇಶಕ ಪುರುಷೋತ್ತಮ ಓಂಕಾರಸ್ವಾಮಿ ಮಾಹಿತಿ ನೀಡಿದರು.

## ವಿನೂತ ಪತ್ತಾರರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಜಯ ಕಲಾ ಮಂದಿರ ಚಿತ್ರಕಲಾ ಮಹಾವಿದ್ಯಾಲಯದ ಬಿವಿಎ ಅಂತಿಮ ವರ್ಷದ ವಿದ್ಯಾರ್ಥಿ ವಿನೂತ ಎಸ್.ಪತ್ತಾರ ಇವರು ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ ಹಾಗೂ ಯುವ ಸಬಲೀಕರಣ ಇಲಾಖೆ ಸಹಯೋಗದಲ್ಲಿ ಜರುಗಿದ ಯುವಜನೋತ್ಸವ-2025 ಚಿತ್ರಕಲಾ ಸ್ಪರ್ಧೆಯಲ್ಲಿ ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ದೆಹಲಿಯಲ್ಲಿ ಜರುಗಿದ ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿಯೂ ಭಾಗವಹಿಸಿ ಕಾಲೇಜಿಗೆ ಕೀರ್ತಿ ತಂದಿದ್ದಕ್ಕಾಗಿ ವಿಜಯ ಕಲಾಮಂದಿರ ಚಿತ್ರಕಲಾ ಮಹಾವಿದ್ಯಾಯದ ಪ್ರಾಚಾರ್ಯರು, ಸಿಬ್ಬಂದಿವರ್ಗ, ವಿದ್ಯಾರ್ಥಿಗಳ ಹಾಗೂ ಆಡಳಿತ ಮಂಡಳಿ ಸದಸ್ಯರು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ವಿಜಯ ಕಲಾಮಂದಿರ ಸಂಸ್ಥೆಯ ಕಾರ್ಯದರ್ಶಿ ಪ್ರಕಾಶ ಟಿ.ಅಕ್ಕಿ, ಪ್ರಾಚಾರ್ಯ ಕೃಷ್ಣಾ ಕೆ.ಎಮ್. ಉಪನ್ಯಾಸಕರಾದ ಶರಣಪ್ಪ ಬಿ.ಹೆಚ್, ಗಣೇಶ ಬಡಿಗೇರ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



## ಬಿಡಾಡಿ ಜಾನುವಾರುಗಳಿಂದ ರಕ್ಷಣೆ ನೀಡಲು ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ರಸ್ತೆಯಲ್ಲಿ ನಡೆದು ಹೋಗುತ್ತಿದ್ದ ವ್ಯಕ್ತಿಗೆ ಬಿಡಾಡಿ ಗೂಳಿಯು ಗುದ್ದಿದ್ದರಿಂದ ಸ್ಥಳದಲ್ಲಿಯೇ ವ್ಯಕ್ತಿಯು ಮೃತಪಟ್ಟ ಘಟನೆ ಮಾಸುವ ಮುನ್ನವೇ ಬೆಟಗೇರಿಯಲ್ಲಿ ಇನ್ನೊಂದು ಬಿಡಾಡಿ ಗೂಳಿಯು ಗುದ್ದಿದ್ದರಿಂದ ವ್ಯಕ್ತಿಯು ದೊಡ್ಡ ಚರಂಡಿಯಲ್ಲಿ ಬಿದ್ದು ಗಾಯಗೊಂಡಿದ್ದಾರೆ. ಇಂತಹ ಬಿಡಾಡಿ ದನಗಳ ಹಾವಳಿಯಿಂದ ಸಾರ್ವಜನಿಕರು ಭಯಭೀತರಾಗಿದ್ದು, ಎಲ್ಲ ಬಿಡಾಡಿ ದನಗಳನ್ನು ಗೋಶಾಲೆಗೆ ಸಾಗಿಸಿ ರಕ್ಷಣೆ ಒದಗಿಸಬೇಕೆಂದು ಗದಗ-ಬೆಟಗೇರಿ ಸಾರ್ವಜನಿಕ ಹಿತರಕ್ಷಣಾ ಸಮಿತಿಯ ಅಧ್ಯಕ್ಷ ಆಸೀಫ್ ಅಲಿ ಉಮನಾಬಾದಿ ಇವರ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಶ್ರೀಧರ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಸಲೀಮ್ ಶಹಾಪೂರ, ಮಹಬೂಬ ಓಲಿ, ಮೊಹ್ಮದ ಯೂಸುಫ್, ನಾವೀದ್ ಕಲಾದಗಿ, ದಾದಾಪೀರ ಹುಬ್ಬಳ್ಳಿ, ಸಾಧಿಕ್ ಸಿತ್ತವಾಡಗಿ, ಅಸ್ಲಮ್ ಮಾಲದಾರ, ತಬ್ರೇಜ್ ಕಲಾದಗಿ, ಆಫಾನ್ ಕಂಪ್ಲಿ, ಮೈನುದ್ದೀನ ಕಲಾದಗಿ, ಮುಸ್ತಾಖ ಅಹ್ಮದ ಮುಲ್ಲಾ, ರಶೀದ ಮುಲ್ಲಾ, ಅಸ್ಲಮ್ ಖಾದರವರ ಮುಂತಾದವರು ಇದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka